ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ
ಧಾರವಾಡ । ಹಾವೇರಿ । ಗದಗ । ರಾಯಚೂರು । ವಿಜಯನಗರ । ತುಮಕೂರು

ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು | ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ | EDITOR : S VENKATESULU

ಸಂಪುಟ : 01 ಸಂಚಿಕೆ : 100 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಸೋಮವಾರ ದಿನಾಂಕ : 02-11-2026 ಪುಟ : 04 ಬೆಲೆ : 2-00

ದೀಪಾವಳಿ ಹಬ್ಬಕ್ಕೆ ಊರಿಗೆ ಹೋಗುವವರಿಗೆ
KSRTC ಸಿಹಿಸುದ್ದಿ;
2,600 ಹೆಚ್ಚುವರಿ ಬಸ್‌ಗಳ ವ್ಯವಸ್ಥೆ..!

ಬೆಂಗಳೂರು: ದೀಪಾವಳಿ ಹಬ್ಬ ಹಾಗೂ ವಾರಾಂತ್ಯದ ಪ್ರಯಾಣಿಕರ ದಟ್ಟಣೆಯನ್ನು ಗಮನದಲ್ಲಿಟ್ಟುಕೊಂಡು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ನವೆಂಬರ್ 6ರಿಂದ 8ರವರೆಗೆ ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ 2,600 ಹೆಚ್ಚುವರಿ ಬಸ್‌ಗಳನ್ನು ಕಾರ್ಯಾಚರಣೆ ಮಾಡಲಿದೆ.

ಹಬ್ಬ ಮುಗಿಸಿ ವಾಪಸ್ ಬರುವ ಪ್ರಯಾಣಿಕರ ಅನುಕೂಲಕ್ಕಾಗಿ ನವೆಂಬರ್ 10 ಮತ್ತು 11ರಂದು ರಾಜ್ಯದೊಳಗಿನ ಹಾಗೂ ಹೊರರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ವಿಶೇಷ ಬಸ್‌ಗಳು ಸಂಚರಿಸಲಿವೆ.

ನವೆಂಬರ್ 8ರಂದು ನರಕ ಚತುರ್ದಶಿ ಹಾಗೂ ನವೆಂಬರ್ 10ರಂದು ಬಲಿಪಾಡ್ಯಮಿ ಇರುವ ಹಿನ್ನೆಲೆಯಲ್ಲಿ ಈ ವಿಶೇಷ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಕೆಂಪೇಗೌಡ

–(2ನೇ ಪುಟಕ್ಕೆ...)



ಕಬ್ಬಿನ ಎಸ್‌ಎಪಿ ಬಗ್ಗೆ ಸಿಎಂ ತೀರ್ಮಾನ ಮಾಡುತ್ತಾರೆ: ಸಕ್ಕರೆ ಸಚಿವ ರುದ್ರಪ್ಪ ಲಮಾಣಿ



ಹಾವೇರಿ: ಖಾಸಗಿ ಸಕ್ಕರೆ ಕಾರ್ಖಾನೆಗಳಿಗೆ ಬಂದ್ ಮಾಡಿ ಅಂತ ಹೇಳೋದು ಕಷ್ಟ ಎಂದು ಸಕ್ಕರೆ ಸಚಿವ ರುದ್ರಪ್ಪ ಲಮಾಣಿ ಅಭಿಪ್ರಾಯಪಟ್ಟಿದ್ದಾರೆ. ಹಾವೇರಿಯಲ್ಲಿ ಮಾತನಾಡಿದ ಅವರು ನಮಗೆ ಖಾಸಗಿ ಕಾರ್ಖಾನೆಗಳ ಮೇಲೆ ನಮ್ಮ ನಿಯಂತ್ರಣ ಇದೆ. ಅವರು ನಾವು ಹೇಳಿದಂಗೆ ಕೇಳಬೇಕಾಗುತ್ತೆ, ಆದರೆ ಅವರ ಕಷ್ಟಾನೂ ಕೇಳಬೇಕಾಗುತ್ತೆ ಎಂದು ಹೇಳಿದರು.

ಕಬ್ಬಿಗೆ ಎಸ್‌ಎಪಿ ಕೊಡುವಂತೆ ಆಗ್ರಹಿಸಿ ಕಬ್ಬು ಬೆಳೆಗಾರರ ಹೋರಾಟ ವಿಚಾರ ಕುರಿತಂತೆ ಮಾತನಾಡಿದ ಅವರು, ಸಾಧಕ-ಬಾಧಕ ಹೇಳಿದ್ದೇವೆ. ನನ್ನ ಅಭಿಪ್ರಾಯ ಕೂಡಾ ತಿಳಿಸಿದ್ದೇನೆ. ಕಮಿಟಿ ರಿಪೋರ್ಟ್ ಬರಬೇಕು. ರಾಜ್ಯ, ಕೇಂದ್ರ, ಕಾರ್ಖಾನೆಗಳ ಮಾಲೀಕರು, ಬೆಳೆಗಾರರು ಸೇರಿ ತೀರ್ಮಾನ ಮಾಡಬೇಕು ಎಂದರು.

ಬೆಂಕಿ ಹತ್ತಿ ಶಾರ್ಟ್ ಸರ್ಕ್ಯೂಟ್ ಆಗಿ ಕಬ್ಬು ಸುಡಲಾರಂಭಿಸಿದೆ. ರೈತ ಮುಖಂಡರು ಕೂಡಾ ನನ್ನ ಬಳಿ ಬಂದು ಸಮಸ್ಯೆ ಸರಿ ಮಾಡೋಣ ಅಂದಿದ್ದರು. ಎಕ್ಸ್‌ಪರ್ಟ್

–(2ನೇ ಪುಟಕ್ಕೆ...)

72 ಸಾವಿರ ಸರ್ಕಾರಿ ಹುದ್ದೆಗಳ ಭರ್ತಿಗೆ ಆದೇಶ: ಸಿಎಂ ಡಿಕೆಶಿ ಮಹತ್ವದ ಘೋಷಣೆ
15 ಸಾವಿರ ಶಿಕ್ಷಕರ ನೇಮಕ, 5 ಲಕ್ಷ ನಿವೇಶನ ಹಂಚಿಕೆ, ರೈತರಿಗೆ ಹೊಸ ಯೋಜನೆಗಳು
ಶಿಕ್ಷಣ, ಉದ್ಯೋಗ, ಕೃಷಿ ಕ್ಷೇತ್ರಕ್ಕೆ ಹೊಸ ಭರವಸೆ



ಬೆಂಗಳೂರು : ಕನ್ನಡ ರಾಜ್ಯೋತ್ಸವದ ಸಂಭ್ರಮದ ನಡುವೆ ರಾಜ್ಯದ ಅಭಿವೃದ್ಧಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಲವು ಮಹತ್ವದ ಘೋಷಣೆಗಳನ್ನು ಮಾಡಿದ್ದಾರೆ. ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಶಿಕ್ಷಣ, ಉದ್ಯೋಗ, ಕೃಷಿ, ವಸತಿ, ಆರೋಗ್ಯ, ನಗರಾಭಿವೃದ್ಧಿ ಹಾಗೂ ಕ್ರೀಡಾ ಕ್ಷೇತ್ರಗಳಿಗೆ ಸಂಬಂಧಿಸಿದ ಹೊಸ ಯೋಜನೆಗಳನ್ನು ಪ್ರಕಟಿಸಿದರು. ರಾಜ್ಯದ ನಿರುದ್ಯೋಗಿ ಯುವಜನರು, ರೈತರು, ಬಡವರು ಹಾಗೂ

–(2ನೇ ಪುಟಕ್ಕೆ...)

ಕನ್ನಡ ಬಾವುಟದ ವಿನ್ಯಾಸ ಬದಲು:
ಹಳದಿ-ಕೆಂಪು ಕನ್ನಡ ಧ್ವಜಕ್ಕೆ ಮತ್ತೊಂದು ಬಣ್ಣ, ಮಧ್ಯದಲ್ಲಿ ರಾಜ್ಯ ಲಾಂಛನ;
ಡಿಕೆಶಿ ಮಹತ್ವದ ಘೋಷಣೆ

ಬೆಂಗಳೂರು: ಕನ್ನಡ ರಾಜ್ಯೋತ್ಸವದ ಅಂಗವಾಗಿ ಕನ್ನಡ ಧ್ವಜದ ವಿನ್ಯಾಸದಲ್ಲಿ ಮಹತ್ವದ ಬದಲಾವಣೆ ತರಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಸಾಂಪ್ರದಾಯಿಕ ಹಳದಿ ಮತ್ತು ಕೆಂಪು ಬಣ್ಣದ ಧ್ವಜಕ್ಕೆ

–(2ನೇ ಪುಟಕ್ಕೆ...)

ನಂದಿನಿ ಹಾಲಿನ ದರ ಏರಿಕೆ: ಬೆಲೆ ಏರಿಕೆಯ ಬಿಸಿ
ಸರ್ಕಾರ ಹೇಳಿದ್ದು 8 ಏರಿಕೆ, ಮಾರುಕಟ್ಟೆಯಲ್ಲಿ 12 ಹೆಚ್ಚಳದ ಆರೋಪ



ಬೆಂಗಳೂರು : ರಾಜ್ಯದಲ್ಲಿ ನಂದಿನಿ ಹಾಲು ಮತ್ತು ಮೊಸರಿನ ದರ ಏರಿಕೆ ಗ್ರಾಹಕರ ಆಕ್ರೋಶಕ್ಕೆ ಕಾರಣವಾಗಿದೆ. ನವೆಂಬರ್ 1ರಿಂದ ಜಾರಿಗೆ ಬಂದಿರುವ ಪರಿಷ್ಕೃತ ದರಗಳು ಸಾಮಾನ್ಯ ಜನರ ಜೇಬಿಗೆ ಮತ್ತಷ್ಟು ಹೊರೆಯಾಗಿದ್ದು, ಸರ್ಕಾರ ಘೋಷಿಸಿರುವ 8 ದರ ಏರಿಕೆಗೂ ಮಾರುಕಟ್ಟೆಯಲ್ಲಿ ವಸೂಲಿ ಮಾಡಲಾಗುತ್ತಿರುವ ದರಕ್ಕೂ ವ್ಯತ್ಯಾಸವಿದೆ ಎಂದು ಗ್ರಾಹಕರು ಆರೋಪಿಸಿದ್ದಾರೆ. ಕೆಲವೊಂದು ಹಾಲಿನ ಉತ್ಪನ್ನಗಳ ಬೆಲೆ ಲೀಟರ್‌ಗೆ 12ರವರೆಗೆ ಹೆಚ್ಚಳವಾಗಿರುವುದು ಗ್ರಾಹಕರ ಅಸಮಾಧಾನಕ್ಕೆ ಕಾರಣವಾಗಿದೆ.

ಕರ್ನಾಟಕ ಹಾಲು ಮಹಾಮಂಡಳಿ (ಕೆಎಂಎಫ್) ನಂದಿನಿ ಹಾಲು ಮತ್ತು ಮೊಸರಿನ ದರವನ್ನು ಪರಿಷ್ಕರಿಸಿದ್ದು, ಸಾಮಾನ್ಯ ಟೋನ್ಡ್ ಹಾಲಿನ ಪ್ರತಿ ಲೀಟರ್ ಬೆಲೆ 46ರಿಂದ 54ಕ್ಕೆ ಏರಿಕೆ-ಯಾಗಿದೆ. ಸರ್ಕಾರದ ಪ್ರಕಾರ ಹೆಚ್ಚುವರಿ 8ರಲ್ಲಿ 7 ನೇರವಾಗಿ

–(2ನೇ ಪುಟಕ್ಕೆ...)

ವಿವಿಒ ಪರೀಕ್ಷೆ ಟಾಪರ್ ಪ್ರಕರಣಕ್ಕೆ ಟ್ವಿಸ್ಟ್:
ಮೊಬೈಲ್ ಬಳಸಿ ಪರೀಕ್ಷೆ ಬರೆದಿರುವುದು ಪತ್ತೆ



ಹಾವೇರಿ: ಪೊಲೀಸ್ ಕಾನ್‌ಸ್ಟೇಬಲ್ ಪರೀಕ್ಷೆಯಲ್ಲಿ 25 ಅಂಕ ಪಡೆದವನು, ವಿಎಒ ಪರೀಕ್ಷೆಯಲ್ಲಿ 151 ಅಂಕ ಪಡೆದು ರಾಜ್ಯಕ್ಕೆ ಟಾಪರ್ ಆದ ಯುವಕನ ಪ್ರಕರಣಕ್ಕೆ ಇದೀಗ ಬಿಗ್ ಟ್ವಿಸ್ಟ್ ಸಿಕ್ಕಿದೆ.

–(2ನೇ ಪುಟಕ್ಕೆ...)

ಕನ್ನಡ ಭಾಷಾಭಿಮಾನ ನಿತ್ಯದ ಉಸಿರಾಗಲಿ: ಸಚಿವ ಎಸ್ಸೆಸ್ಸೆಂ
ದಾವಣಗೆರೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವ ಸಂಭ್ರಮ; 40 ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿ



ದಾವಣಗೆರೆ : ಕನ್ನಡ ಭಾಷಾಭಿಮಾನವು ಕೇವಲ ನವೆಂಬರ್ ತಿಂಗಳ ಆಚರಣೆಗೆ ಸೀಮಿತವಾಗದೆ, ಪ್ರತಿಯೊಬ್ಬ ಕನ್ನಡಿಗನ ನಿತ್ಯದ ಉಸಿರಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಕರೆ ನೀಡಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಭಾನುವಾರ ಆಯೋಜಿಸಲಾಗಿದ್ದ 71ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. 1956ರ ನವೆಂಬರ್ 1ರಂದು ಮುಂಬೈ, ಮದ್ರಾಸ್, ಹೈದರಾಬಾದ್ ಹಾಗೂ ಮೈಸೂರು ಪ್ರಾಂತ್ಯಗಳಲ್ಲಿ ಹಂಚಿಹೋಗಿದ್ದ ಕನ್ನಡ ಭಾಷಿಕ ಪ್ರದೇಶಗಳು ಒಂದಾಗಿ ಕರ್ನಾಟಕ ಏಕೀಕರಣಗೊಂಡ ಐತಿಹಾಸಿಕ ಕ್ಷಣವನ್ನು ಸ್ಮರಿಸಿದರು. ಆಲೂರು ವೆಂಕಟರಾಯರು, ಕೆಂಗಲ್ ಹನುಮಂತಯ್ಯ, ಎಸ್. ನಿಜಲಿಂಗಪ್ಪ ಸೇರಿದಂತೆ ನಾಡಿನ ಏಕೀಕರಣಕ್ಕಾಗಿ ಶ್ರಮಿಸಿದ ಮಹನೀಯರ ಕೊಡುಗೆಯನ್ನು ಸ್ಮರಿಸಿದ ಅವರು, ಕರ್ನಾಟಕಕ್ಕೆ ಎರಡು ಸಾವಿರ ವರ್ಷಗಳಿಗೂ ಮೀರಿದ ಸಾಹಿತ್ಯಿಕ, ಐತಿಹಾಸಿಕ ಹಾಗೂ ಸಾಂಸ್ಕೃತಿಕ ಪರಂಪರೆಯಿದೆ ಎಂದು ಹೆಮ್ಮೆಯಿಂದ ಹೇಳಿದರು.

ಸರ್ಕಾರದ 'ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು' ಎಂಬ ಆಶಯ ದೊಂದಿಗೆ ಜಾರಿಗೊಳಿಸಿರುವ ಪಂಚ ಗ್ಯಾರಂಟಿ ಯೋಜನೆಗಳು ಜನಸಾಮಾನ್ಯರಿಗೆ ಸಾಮಾಜಿಕ ಮತ್ತು ಆರ್ಥಿಕ ಶಕ್ತಿ ತುಂಬುತ್ತಿವೆ.

–(2ನೇ ಪುಟಕ್ಕೆ...)

ಕನ್ನಡ ರಾಜ್ಯೋತ್ಸವಕ್ಕೆ ಪ್ರಧಾನಿ ಮೋದಿ ಶುಭಾಶಯ: ಕನ್ನಡ ಸಂಸ್ಕೃತಿಗೆ ಮೆಚ್ಚುಗೆ



ಬೆಂಗಳೂರು: ಕನ್ನಡ ರಾಜ್ಯೋತ್ಸವದ ಅಂಗವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕನ್ನಡಿಗರಿಗೆ ಕನ್ನಡದಲ್ಲೇ ಶುಭಾಶಯ ಕೋರಿದ್ದಾರೆ.

ಕರ್ನಾಟಕದ ಶ್ರೀಮಂತ ಪರಂಪರೆ, ಸಾಂಸ್ಕೃತಿಕ ವೈಭವ ಹಾಗೂ ವಿವಿಧ ಕ್ಷೇತ್ರಗಳಲ್ಲಿನ ಸಾಧನೆಗಳನ್ನು ಇಬ್ಬರೂ ನಾಯಕರು ಶ್ಲಾಘಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಪ್ರಧಾನಮಂತ್ರಿ

–(2ನೇ ಪುಟಕ್ಕೆ...)

ಕನ್ನಡ ನಾಡು, ನುಡಿ, ಸಂಸ್ಕೃತಿ ರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಿ: ಸಚಿವ ಬಸವಂತಪ್ಪ
14 ಸಾಧಕರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ; ಕನ್ನಡ ಗೀತೆಗಳಿಗೆ ವಿದ್ಯಾರ್ಥಿಗಳ ಮನಮೋಹಕ ನೃತ್ಯ



ವಿಜಯನಗರ : ಕನ್ನಡ ಭಾಷೆ, ನಾಡು, ನುಡಿ ಹಾಗೂ ಸಂಸ್ಕೃತಿಯ ರಕ್ಷಣೆ ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿಯಾಗಿದ್ದು, ಆಧುನಿಕ ತಂತ್ರಜ್ಞಾನದ ಎಲ್ಲ ಕ್ಷೇತ್ರಗಳಲ್ಲೂ ಕನ್ನಡವನ್ನು ಬೆಳೆಸಲು ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಮುಜರಾಯಿ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್. ಬಸವಂತಪ್ಪ ಕರೆ ನೀಡಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಭಾನುವಾರ ನಡೆದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಭವ್ಯ ಇತಿಹಾಸವಿದೆ. ದೇಶದಲ್ಲಿಯೇ ಅತಿ ಹೆಚ್ಚು ಎಂಟು ಜ್ಞಾನಪೀಠ

–(3ನೇ ಪುಟಕ್ಕೆ...)

ಸ್ಟಿಂಗ್ ಆಪರೇಷನ್ ಬಗ್ಗೆ ದೂರು ನೀಡಲು ಸಿದ್ದರಾಮಯ್ಯ ದಿಲ್ಲಿಗೆ ಹೋಗಿಲ್ಲ: ಜಮೀರ್
"ಸಿದ್ದರಾಮಯ್ಯ ಮತ್ತು ಡಿಕೆಶಿ ನಡುವೆ ಭಿನ್ನಾಭಿಪ್ರಾಯ ಮೂಡಿಸಲು ಕೆಲವರಿಂದ ಯತ್ನ"



ಬಳ್ಳಾರಿ: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯಾವುದೇ ಸ್ಟಿಂಗ್ ಆಪರೇಷನ್ ಕುರಿತು ದೂರು ನೀಡಲು ದೆಹಲಿಗೆ ಹೋಗಿಲ್ಲ. ಬದಲಾಗಿ ಅಲ್ಲಿ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಭಾಗವಹಿಸಲು ತೆರಳಿದ್ದಾರೆ ಎಂದು ವಸತಿ ಸಚಿವ ಬಿ.ಝಡ್.ಝಮೀರ್ ಅಹ್ಮದ್ ಖಾನ್ ಸ್ಪಷ್ಟಪಡಿಸಿದರು. ನಗರದ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ರವಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕನ್ನಡ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಸೇರಿದಂತೆ ಯಾವುದೇ ಸಚಿವರು ದೆಹಲಿಗೆ ತೆರಳುತ್ತಿಲ್ಲ. ಎಐಸಿಸಿ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರ ಕರೆಯ ಮೇರೆಗೆ ಸಿದ್ದರಾಮಯ್ಯ ಅವರು ಮಾತ್ರ ದೆಹಲಿಗೆ ತೆರಳುತ್ತಿದ್ದಾರೆ ಎಂದರು. ಸ್ಟಿಂಗ್ ಆಪರೇಷನ್ ಮಾಡಿದ್ದು ನಾನೇ ಎಂದು ರಾಕೇಶ್ ಶೆಟ್ಟಿ ಅವರೇ ಹೇಳಿಕೊಂಡಿದ್ದಾರೆ. ಆದರೆ ಅದರಲ್ಲಿ ಯಾವುದೇ ಸತ್ಯಾಂಶವಿಲ್ಲ. ಏನೋ ವಿಷಯವಿದೆ ಎಂದು ಸ್ಟಿಂಗ್ ಮಾಡಲು ಹೋಗಿ, ಕೊನೆಗೆ ಯಾವುದೇ ಆಧಾರ ಸಿಗದಿದ್ದಾಗ ಅದನ್ನು ಕೈಬಿಟ್ಟಿರುವುದಾಗಿ ಅವರೇ ಸ್ಪಷ್ಟಪಡಿಸಿದ್ದಾರೆ. ಅವರೆಲ್ಲ ಬ್ಲಾಕ್‌ಮೇಲರ್‌ಗಳು. ಈ ಬಗ್ಗೆ ಪಕ್ಷವು ಈಗಾಗಲೇ ಸೂಕ್ತ ತೀರ್ಮಾನ ಕೈಗೊಂಡು ಅವರನ್ನು ಅಮಾನತುಗೊಳಿಸಿದೆ.

ಕೆಲವರು ಬೇರೆ ಕೆಲಸವಿಲ್ಲದೆ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನಡುವೆ ಭಿನ್ನಾಭಿಪ್ರಾಯ ಮೂಡಿಸಲು ಯತ್ನಿಸುತ್ತಿದ್ದಾರೆ. ಆದರೆ ಅದು ಎಂದಿಗೂ ಸಾಧ್ಯವಿಲ್ಲ ಎಂದು ಪ್ರತಿಪಾದಿಸಿದರು.

ನಿಗದಿಪಡಿಸಿದ್ದಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಹಾಲಿನ ದರ ಏರಿಕೆಯಾಗಿರುವ ವಿಚಾರವನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರುತ್ತೇನೆ. ರೈತರ ಬೇಡಿಕೆಯ ಹಿನ್ನೆಲೆಯಲ್ಲಿ ನಾವು ಕೇವಲ 3 ರೂ. ಹೆಚ್ಚಳ ಮಾಡಿದ್ದೇವೆ. ಈ ದರ ಹೆಚ್ಚಳದಿಂದ ಸರ್ಕಾರಕ್ಕೆ ಯಾವುದೇ ಲಾಭವಿಲ್ಲ. ಇನ್ನು ಕಳೆದ 10 ವರ್ಷಗಳಿಂದ ಬಸ್ ದರ ಹೆಚ್ಚಳ ಮಾಡಿರಲಿಲ್ಲ. ಪ್ರಸ್ತುತ ಡೀಸೆಲ್ ದರ ಗಣನೀಯವಾಗಿ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಬಸ್ ದರ ಹೆಚ್ಚಳ ಅನಿವಾರ್ಯವಾಗಿದೆ ಎಂದು ಸಮರ್ಥಿಸಿಕೊಂಡರು.

ಕನ್ನಡ ಭಾಷಾಭಿಮಾನ ನಿತ್ಯದ ಉಸಿರಾಗಲಿ: ಸಚಿವ ಎಸ್ಸೆಸ್ಸೆಂ

ದಾವಣಗೆರೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವ ಸಂಭ್ರಮ; 40 ಸಾಧಕರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ

–(ಮೊದಲನೇ ಪುಟದಿಂದ..)

ಬರಗಾಲದ ಸಂಕಷ್ಟದ ಸಂದರ್ಭದಲ್ಲಿಯೂ ರೈತರ ನೆರವಿಗೆ ರಾಜ್ಯ ಸರ್ಕಾರ ಸದಾ ಸಿದ್ಧವಿದೆ ಎಂದು ಭರವಸೆ ನೀಡಿದರು. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ಅಧಿನಿಯಮ–2022ರ ಅನ್ವಯ ವಾಣಿಜ್ಯ ಸಂಸ್ಥೆಗಳ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಬಳಕೆ ನಿಯಮ ಪಾಲಿಸದ 32 ಸಂಸ್ಥೆಗಳಿಂದ 48 ಸಾವಿರ ದಂಡ ವಸೂಲಿ ಮಾಡಲಾಗಿದೆ. ಕೈಗಾರಿಕಾ ವಿಕೇಂದ್ರೀಕರಣದ ಮೂಲಕ ದಾವಣಗೆರೆಯಲ್ಲಿ ಐಟಿ–ಬಿಟಿ ಸೇರಿದಂತೆ ವಿವಿಧ ಉದ್ಯಮಗಳನ್ನು ಸ್ಥಾಪಿಸಿ ಸ್ಥಳೀಯ ಯುವಜನರಿಗೆ ಉದ್ಯೋಗಾವಕಾಶ ಕಲ್ಪಿಸಲು ಪ್ರಯತ್ನಿಸಲಾಗುತ್ತಿದೆ ಎಂದರು.

ರಾಜ್ಯೋತ್ಸವದ ಅಂಗವಾಗಿ ನಾಡು–ನುಡಿ, ಸಾಹಿತ್ಯ, ಸಂಗೀತ, ಕಲೆ, ಕ್ರೀಡೆ, ಪತ್ರಿಕೋದ್ಯಮ, ಸಮಾಜಸೇವೆ ಹಾಗೂ ಕನ್ನಡಪರ ಹೋರಾಟ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಜಿಲ್ಲೆಯ 40 ಸಾಧಕರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು. ರಂಗಭೂಮಿ, ಸಾಹಿತ್ಯ, ಭಜನೆ, ಹಿಂದುಸ್ತಾನಿ ಸಂಗೀತ, ಡೋಳುಕುಣಿತ, ಜಾನಪದ, ಛಾಯಾಗ್ರಹಣ, ತಬಲ, ವೀರಗಾಸೆ, ಬೀದಿನಾಟಕ, ಶಿಲ್ಪಕಲೆ, ವಿಜ್ಞಾನ ಮತ್ತು ತಂತ್ರಜ್ಞಾನ ಸೇರಿದಂತೆ ಹಲವು ಕ್ಷೇತ್ರಗಳ ಸಾಧಕರನ್ನು ಗುರುತಿಸಿ ಸನ್ಮಾನಿಸಲಾಯಿತು.

ಪ್ರಶಸ್ತಿ ಪುರಸ್ಕೃತರಲ್ಲಿ ಬಸವರಾಜ (ನ್ಯಾಮತಿ), ಜಿ. ಮುರಿಗಪ್ಪಗೌಡ, ಬಿ.ಎಚ್. ಅಂಜಿನಪ್ಪ, ಮಾನಾಚಾರಿ ಕೆ., ಕೋಟ್ರಪ್ಪ, ರಮಾಬಾಯಿ ಕಮಲಾಕರ್, ಬಿ. ತಿರುಕಪ್ಪ, ಪಿ. ಜಯರಾಮನ್, ಬಾ.ರಾ. ಮಹೇಶ್, ಎ.ಕೆ. ಓಬಪ್ಪ, ಕುಮಾರ್, ಹೆಚ್.ಎನ್. ಶಿವಕುಮಾರಸ್ವಾಮಿ, ಬೆನಕನಹಳ್ಳಿ ಶೇಖರಗೌಡ, ಗೀತಾ ಚಂದ್ರಶೇಖರ, ಮಂಜುನಾಥ ಬಿ., ಜಿ. ಮುದ್ದುವೀರಸ್ವಾಮಿ, ರವಿಕುಮಾರ್ ಕೆ.ಬಿ., ಶಹನವಾಜ್ ಯು.ಆರ್., ಜಿ. ಶಂಭುಲಿಂಗಪ್ಪ, ಎಸ್.ಎಸ್. ಮಂಜುಶ್ರೀ, ರಮೇಶ್ ಮಾನೆ, ಸತೀಶ್ ಎಂ.ವೈ., ಶಿವಮೂರ್ತಿ ಆರ್., ಎಂ.ಆರ್. ಮಾಲತೇಶ್, ಡಿ. ರಂಗನಾಥ್, ರಮೇಶ್ ಜಹಗೀರ್‌ದಾರ್, ಎಸ್.ಪಿ. ನಾರಾಯಣರಾವ್, ಎಸ್. ಕೋಟೇಶ್, ಕೆ.ಎನ್. ಮಲ್ಲಿಕಾರ್ಜುನ ಮೂರ್ತಿ, ಶೇಖರಗೌಡ ಪಾಟೀಲ್, ಎ.ಎನ್. ನಿಂಗಪ್ಪ, ಟಿ. ಕರಿಬಸಪ್ಪ, ವೈ. ಮಲ್ಲೇಶ್ ಶಿಲ್ಪಿ, ರಮೇಶ್ ಬಿ., ಸಲೀಂ ಜಾವೀದ್, ಗಣೇಶ್ ಕುಮಾರ್, ಪುನೀತ್ ಅಪ್ಪಿ, ಹನುಮಂತರಾವ್ ಬಿ. ಹಾಗೂ ಶಿವ ಕೆ. ಬೆಳಗುತ್ತಿ ಸೇರಿದಂತೆ ಒಟ್ಟು 40 ಮಂದಿ ಸೇರಿದ್ದಾರೆ.

ರಾಜ್ಯೋತ್ಸವದ ಅಂಗವಾಗಿ ಪೊಲೀಸ್ ಇಲಾಖೆ, ಗೃಹರಕ್ಷಕ ದಳ, ಅರಣ್ಯ ಇಲಾಖೆ, ಅಗ್ನಿಶಾಮಕ ದಳ, ಕಾಲೇಜುಗಳು ಹಾಗೂ ಶಾಲೆಗಳ ತಂಡಗಳು ಆಕರ್ಷಕ ಪಥಸಂಚಲನ ನಡೆಸಿದವು. ಪೊಲೀಸ್ ಮತ್ತು ಸರ್ಕಾರಿ ಇಲಾಖೆಗಳ ವಿಭಾಗದಲ್ಲಿ ಡಿಎಆರ್ ಪೊಲೀಸ್ ತಂಡ ಪ್ರಥಮ, ನಗರ ಉಪವಿಭಾಗ ಪೊಲೀಸ್ ತಂಡ ದ್ವಿತೀಯ ಹಾಗೂ ಅಗ್ನಿಶಾಮಕ ದಳ ತೃತೀಯ ಸ್ಥಾನ ಪಡೆದವು.

ಎನ್‌ಸಿಸಿ ವಿಭಾಗದಲ್ಲಿ ಜಿಎಫ್‌ಜಿಸಿ ಕಾಲೇಜು ಪ್ರಥಮ, ಎಆರ್‌ಜಿ ತಂಡ ದ್ವಿತೀಯ ಹಾಗೂ ಡಿಆರ್‌ಆರ್ ಕಾಲೇಜು ತೃತೀಯ ಸ್ಥಾನ ಗಳಿಸಿದವು. ಶಾಲಾ ವಿಭಾಗದಲ್ಲಿ ಸಿದ್ದಗಂಗಾ ಶಾಲೆ ಪ್ರಥಮ, ಜೈನ್ ಪಬ್ಲಿಕ್ ಶಾಲೆ ದ್ವಿತೀಯ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ತಂಡ ತೃತೀಯ ಸ್ಥಾನ ಪಡೆದವು. ಅತ್ಯುತ್ತಮ ಉಡುಗೆ ವಿಭಾಗದಲ್ಲಿ ಎವಿಕೆ ಕಾಲೇಜು ಎನ್‌ಸಿಸಿ ಪ್ರಥಮ, ಸೇಂಟ್ ಪಾಲ್ಸ್ ಎನ್‌ಸಿಸಿ ದ್ವಿತೀಯ ಹಾಗೂ ಸಿದ್ದಗಂಗಾ ಶಾಲೆ ತೃತೀಯ ಸ್ಥಾನ ಗಳಿಸಿದವು.

72 ಸಾವಿರ ಸರ್ಕಾರಿ ಹುದ್ದೆಗಳ ಭರ್ತಿಗೆ ಆದೇಶ: ಸಿಎಂ ಡಿಕೆಶಿ ಮಹತ್ವದ ಘೋಷಣೆ

15 ಸಾವಿರ ಶಿಕ್ಷಕರ ನೇಮಕ, 5 ಲಕ್ಷ ನಿವೇಶನ ಹಂಚಿಕೆ ಭರವಸೆ

–(ಮೊದಲನೇ ಪುಟದಿಂದ..)

ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಲವು ಕಾರ್ಯಕ್ರಮಗಳನ್ನು ಸರ್ಕಾರ ಜಾರಿಗೆ ತರಲಿದೆ ಎಂದು ತಿಳಿಸಿದರು.

ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ 72,000 ಹುದ್ದೆಗಳನ್ನು ಭರ್ತಿ ಮಾಡಲು ಆದೇಶ ಹೊರಡಿಸಲಾಗಿದೆ ಎಂದು ಮುಖ್ಯಮಂತ್ರಿ ಘೋಷಿಸಿದರು. ಶಾಲಾ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವ ಉದ್ದೇಶದಿಂದ 15,000 ಶಿಕ್ಷಕರ ನೇಮಕಾತಿಗೂ ಆದೇಶಿಸಲಾಗಿದೆ. ಗ್ರಾಮೀಣ ಸರ್ಕಾರಿ ಶಾಲೆಗಳಲ್ಲಿ 1ರಿಂದ 10ನೇ ತರಗತಿವರೆಗೆ ಹಾಗೂ ಪಿಯು ಕಾಲೇಜುಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳಿಗೆ ವೈದ್ಯಕೀಯ, ಎಂಜಿನಿಯರಿಂಗ್ ಸೇರಿದಂತೆ ಉನ್ನತ ವೃತ್ತಿಪರ ಶಿಕ್ಷಣದ ಸರ್ಕಾರಿ ಸೀಟುಗಳಲ್ಲಿ ಶೇ.7.5ರಷ್ಟು ವಿಶೇಷ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರಿ ಶಾಲೆಗಳ 6ರಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ಕೃತಕ ಬುದ್ಧಿಮತ್ತೆ ತರಬೇತಿ ನೀಡುವ ಯೋಜನೆಯನ್ನೂ ಪ್ರಕಟಿಸಲಾಗಿದೆ.

ರಾಜ್ಯದಲ್ಲಿ ಕೈಗಾರಿಕೆ ಹಾಗೂ ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ನಿಟ್ಟಿನಲ್ಲಿ 29,679 ಕೋಟಿ ಮೊತ್ತದ ಬಂಡವಾಳ ಹೂಡಿಕೆಗಳಿಗೆ ಅನುಮೋದನೆ ನೀಡಲಾಗಿದ್ದು, ಇದರಿಂದ ಸುಮಾರು 66,000 ಹೊಸ ಉದ್ಯೋಗಗಳು ಸೃಷ್ಟಿಯಾಗುವ ನಿರೀಕ್ಷೆಯಿದೆ. ಉದ್ಯೋಗಾಕಾಂಕ್ಷಿಗಳಿಗೆ ಅನುಕೂಲವಾಗುವಂತೆ 'ಯುವ ಉದ್ಯೋಗ ಸೇತು' ಮೊಬೈಲ್ ಆಪ್ ಪರಿಚಯಿಸಲಾಗುವುದು. ಅಲ್ಲದೆ, 100 ಐಟಿಐ ಸಂಸ್ಥೆಗಳನ್ನು ಕೈಗಾರಿಕೆಗಳೊಂದಿಗೆ ಸಂಪರ್ಕಿಸಿ 10 ಸಾವಿರ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ. ನಗರ ಪ್ರದೇಶದ ಮಕ್ಕಳಿಗೆ ಗ್ರಾಮೀಣ ಬದುಕು ಮತ್ತು ಕೃಷಿ ಸಂಸ್ಕೃತಿಯ ಪರಿಚಯ ಮಾಡಿಕೊಡಲು 'ಗ್ರಾಮಾನುಭವ' ಕಾರ್ಯಕ್ರಮ ಜಾರಿಗೆ ತರಲಾಗುವುದು ಎಂದು ತಿಳಿಸಿದರು.

ಆಸ್ತಿ ಮಾಲೀಕರಿಗೆ ಕಾನೂನುಬದ್ಧ ಭದ್ರತೆ ಒದಗಿಸುವ ಉದ್ದೇಶದಿಂದ 'ಭೂ ಗ್ಯಾರಂಟಿ' ಯೋಜನೆ ಜಾರಿಗೆ ತರಲಾಗಿದೆ. ಪ್ರಸಕ್ತ ಸಾಲಿನಲ್ಲಿ 9.50 ಲಕ್ಷ ಹೊಸ ಇ–ಖಾತಾಗಳನ್ನು ವಿತರಿಸುವುದರ ಜೊತೆಗೆ 3 ಲಕ್ಷ ಬಿ–ಖಾತಾಗಳನ್ನು ಎ–ಖಾತಾಗಳಾಗಿ ಪರಿವರ್ತಿಸುವ ಗುರಿ ಹೊಂದಲಾಗಿದೆ. ನವೆಂಬರ್ ತಿಂಗಳಲ್ಲಿ ರಾಜ್ಯಾದ್ಯಂತ ಬಡವರಿಗೆ 5 ಲಕ್ಷ ನಿವೇಶನಗಳನ್ನು ಹಂಚಿಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಮುಖ್ಯಮಂತ್ರಿ ಘೋಷಿಸಿದರು.

ರೈತರ ಕಲ್ಯಾಣಕ್ಕೂ ಸರ್ಕಾರ ವಿಶೇಷ ಆದ್ಯತೆ ನೀಡಿದ್ದು, ಕೃಷಿ ಪಂಪ್‌ಸೆಟ್‌ಗಳ ಉಚಿತ ಹಾಗೂ ರಿಯಾಯಿತಿ ವಿದ್ಯುತ್ ಬಳಕೆಗಾಗಿ ಸರ್ಕಾರ 30,000 ಕೋಟಿ ವೆಚ್ಚ ಭರಿಸುತ್ತಿದೆ. ಸುಮಾರು 1,000 ಚದರ ಕಿಲೋಮೀಟರ್ ಪ್ರದೇಶದಲ್ಲಿ ಡ್ರೋನ್ ಮತ್ತು ಉಪಗ್ರಹ ತಂತ್ರಜ್ಞಾನ ಆಧಾರಿತ ಡಿಜಿಟಲ್ ಬೆಳೆ ಸಮೀಕ್ಷೆ ಕೈಗೊಳ್ಳಲಾಗುವುದು. ಸಾವಯವ ಕೃಷಿಗೆ ಉತ್ತೇಜನ ನೀಡಲು 'ವಸುಧಾಮೃತ', ರೈತರ ಆದಾಯ ಹೆಚ್ಚಿಸಲು 'ತೇಗ ಸಿರಿ' ಹಾಗೂ ಬಡ ರೈತರ ಭೂಮಿ ಉಳುಮೆಗೆ ನೆರವಾಗಲು 'ನೇಗಿಲಯೋಗಿ' ಯೋಜನೆಗಳನ್ನು ಶೀಘ್ರದಲ್ಲೇ ಜಾರಿಗೆ ತರಲಾಗುವುದು ಎಂದು ತಿಳಿಸಿದರು.

ಆರೋಗ್ಯ ಕ್ಷೇತ್ರದಲ್ಲಿ 100 ಹೊಸ ಆಂಬುಲೆನ್ಸ್‌ಗಳನ್ನು ಲೋಕಾರ್ಪಣೆ ಮಾಡಲಾಗುತ್ತಿದ್ದು, ವೈದ್ಯಕೀಯ ಕಾಲೇಜುಗಳ ಮೂಲಕ 11 ಸರ್ಕಾರಿ ಆಸ್ಪತ್ರೆಗಳನ್ನು ದತ್ತು ಸ್ವೀಕರಿಸುವ ಪ್ರಕ್ರಿಯೆ ಆರಂಭಿಸಲಾಗಿದೆ. ಕರ್ನಾಟಕ ಪ್ರಾದೇಶಿಕ ನಗರೀಕರಣ ಯೋಜನೆ–2047ರ ಅಡಿಯಲ್ಲಿ ಮುಂದಿನ 20 ವರ್ಷಗಳಲ್ಲಿ 5 ಲಕ್ಷ ಕೋಟಿ ಮೂಲಸೌಕರ್ಯ ಹೂಡಿಕೆ ಮಾಡುವ ಗುರಿ ಹೊಂದಲಾಗಿದೆ. ಕ್ರೀಡಾಪಟುಗಳ ಸಾಧನೆಗೆ ಉತ್ತೇಜನ ನೀಡಲು ಏಷ್ಯನ್ ಗೇಮ್ಸ್ ಪದಕ ವಿಜೇತರಿಗೆ ಚಿನ್ನದ ಪದಕಕ್ಕೆ 1 ಕೋಟಿ, ಬೆಳ್ಳಿಗೆ 75 ಲಕ್ಷ ಹಾಗೂ ಕಂಚಿಗೆ 50 ಲಕ್ಷ ಬಹುಮಾನ ಘೋಷಿಸಲಾಗಿದೆ. ಸರ್ಕಾರಿ ಉದ್ಯೋಗಗಳಲ್ಲಿ ಕ್ರೀಡಾಪಟುಗಳಿಗೆ ಶೇ.2 ಹಾಗೂ ಪೊಲೀಸ್ ಮತ್ತು ಅರಣ್ಯ ಇಲಾಖೆಗಳಲ್ಲಿ ಶೇ.3 ಮೀಸಲಾತಿ ಕಲ್ಪಿಸಲಾಗಿದೆ. 'ಗುರಿ ಒಲಿಂಪಿಕ್ಸ್' ಯೋಜನೆಯಡಿ ತರಬೇತಿಗಾಗಿ 10 ಲಕ್ಷ ನೆರವು ನೀಡಲಾಗುವುದು ಎಂದು ತಿಳಿಸಿದರು.

ಒಟ್ಟಾರೆ, ಕನ್ನಡ ರಾಜ್ಯೋತ್ಸವದ ವೇದಿಕೆಯಲ್ಲಿ ಮುಖ್ಯಮಂತ್ರಿ ಮಾಡಿದ ಈ ಘೋಷಣೆಗಳು ರಾಜ್ಯದ ಶಿಕ್ಷಣ, ಉದ್ಯೋಗ, ಕೃಷಿ, ವಸತಿ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಹೊಸ ದಿಕ್ಕು ನೀಡುವ ನಿರೀಕ್ಷೆ ಮೂಡಿಸಿವೆ.

ಆದರೆ ಘೋಷಣೆಗಳು ಕೇವಲ ಭರವಸೆಗಳಾಗಿ ಉಳಿಯದೆ, ನಿಗದಿತ ಕಾಲಮಿತಿಯಲ್ಲಿ ಅನುಷ್ಠಾನಕ್ಕೆ ಬರಬೇಕು. ವಿಶೇಷವಾಗಿ 72 ಸಾವಿರ ಹುದ್ದೆಗಳ ನೇಮಕಾತಿ ಹಾಗೂ ರೈತ ಕಲ್ಯಾಣ ಯೋಜನೆಗಳು ತ್ವರಿತವಾಗಿ ಜಾರಿಯಾದರೆ ರಾಜ್ಯದ ಲಕ್ಷಾಂತರ ಜನರಿಗೆ ಪ್ರಯೋಜನವಾಗಲಿದೆ ಎಂಬ ನಿರೀಕ್ಷೆ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.

ವಿಎಒ ಪರೀಕ್ಷೆ ಟಾಪರ್ ಪ್ರಕರಣಕ್ಕೆ ಟ್ವಿಸ್ಟ್: ಯುವಕ ಮೊಬೈಲ್ ಬಳಸಿ ಪರೀಕ್ಷೆ ಬರೆದಿರುವುದು ಪತ್ತೆ

–(ಮೊದಲನೇ ಪುಟದಿಂದ..)

ಯುವಕ ಶಂಕರ್ ಬನ್ನೂರು ಅನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದ ವೇಳೆ ಮೊಬೈಲ್ ಬಳಸಿ ಪರೀಕ್ಷೆ ಬರೆದಿರುವುದು ಪತ್ತೆಯಾಗಿದೆ.

ಹಾವೇರಿ ಜಿಲ್ಲೆ ಹಾನಗಲ್‌ನ ಯುವಕ ಶಂಕರ ಬನ್ನೂರು ಕಾನ್‌ಸ್ಟೇಬಲ್ ಪರೀಕ್ಷೆಯಲ್ಲಿ 25 ಅಂಕ ಪಡೆದಿದ್ದ. ಆದರೆ ವಿಎಒ ಪರೀಕ್ಷೆಯಲ್ಲಿ 151 ಅಂಕ ಪಡೆದಿದ್ದ. ರಾಜ್ಯಕ್ಕೆ ಟಾಪರ್ ಆದ ಶಂಕರ್ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಸಾಕಷ್ಟು ಚರ್ಚೆಯಾದ ಹಿನ್ನೆಲೆಯಲ್ಲಿ ಕೆಇಎ ಸಹ ತನಿಖೆಗೆ ಆದೇಶ ಮಾಡಿತ್ತು. ಹಾವೇರಿ ಜಿಲ್ಲಾಧಿಕಾರಿ ವಿಜಯ ಮಹಾಂತೇಶ್ ದಾನಮ್ಮನವರ ವಿಶೇಷ ತಂಡವನ್ನು ರಚಿಸಿ ಮಾಡಿದ್ದರು. ಸವಣೂರು ಎಸಿ ನೇತೃತ್ವದಲ್ಲಿ ತನಿಖೆಗೆ ಆದೇಶ ಮಾಡಿದ್ದರು. ನಾನು ಯಾವುದೇ ಲೋಪದೋಷ ಮಾಡಿಲ್ಲ. ನಾನು ಯಾವುದೇ ತನಿಖೆಗೆ ಸಿದ್ಧ. ಈಗಾಗಲೇ ನಾನು 45 ಪರೀಕ್ಷೆಗಳನ್ನು ಬರೆದಿದ್ದೇನೆ. ಒಂದೊಂದು ಪರೀಕ್ಷೆಯಲ್ಲಿ ಕಡಿಮೆ ಅಂತರದಲ್ಲಿ ನೌಕರಿ ಕಳೆದುಕೊಂಡಿದ್ದೇನೆ. ನಾನು ಯಾವುದೇ ತನಿಖೆಗೆ ಸಿದ್ಧ ಅಂತ ಶಂಕರ್ ಸಹ ಹೇಳಿಕೆ ನೀಡಿದ್ದ. ಈಗ ಇದೆಲ್ಲವೂ ಸುಳ್ಳು ಎಂಬುದು ಗೊತ್ತಾಗಿದೆ. ರಾಜ್ಯಕ್ಕೆ ಮೊದಲ ಸ್ಥಾನ ಪಡೆದಿದ್ದ ಅಭ್ಯರ್ಥಿ ಶಂಕರ್ ಬನ್ನೂರು, ಮೊಬೈಲ್ ಬಳಸಿ ಪರೀಕ್ಷೆ ಬರೆದಿದ್ದ ಮಾಹಿತಿ ಉಪ ವಿಭಾಗಾಧಿಕಾರಿ ವಿಚಾರಣೆಯಿಂದ ಪತ್ತೆಯಾಗಿದೆ.

ಶಂಕರ್ ಬನ್ನೂರು ಅನ್ನು ವಶಕ್ಕೆ ಪಡೆದಿರುವ ಹಾನಗಲ್ ಠಾಣೆ ಪೊಲೀಸರು, ಶಿಗ್ಗಾಂವ್ ಪೊಲೀಸರಿಗೆ ಒಪ್ಪಿಸಿದ್ದಾರೆ. ಶಿಗ್ಗಾವಿಯ ಪರೀಕ್ಷಾ ಕೊಠಡಿಯೊಳಗೆ ಮೊಬೈಲ್ ಕೊಂಡೊಯ್ದಿದ್ದ ಶಂಕರ್, ಗೂಗಲ್ ಲೆನ್ಸ್‌ಆಪ್ ಮೂಲಕ ಪ್ರಶ್ನೆ ಪತ್ರಿಕೆ ಸ್ಕ್ಯಾನ್ ಮಾಡಿ ಉತ್ತರಗಳನ್ನು ಬರೆದಿದ್ದ ಎನ್ನಲಾಗಿದೆ. ಈ ದೃಶ್ಯ, ಪರೀಕ್ಷಾ ಕೇಂದ್ರದ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಅದೇ ಪುರಾವೆ ಆಧರಿಸಿ, ಶಂಕರನನ್ನು ವಶಕ್ಕೆ ಪಡೆಯಲಾಗಿದೆ.

ಆತ, ತಪ್ಪೊಪ್ಪಿಗೆ ನೀಡಲು ಸಿದ್ಧನಾಗಿದ್ದಾನೆ ಎನ್ನಲಾಗಿದೆ. ಪರೀಕ್ಷೆ ಕೇಂದ್ರಕ್ಕೆ ಹೋಗುವಾಗ, ಪ್ರವೇಶ ದ್ವಾರದಲ್ಲಿ ಆಧಾರ್ ಕಾರ್ಡ್ ಮಾತ್ರ ಕೇಳಿದರು. ಅದನ್ನು ತೋರಿಸಿ ಮೊಬೈಲ್ ಸಮೇತ ಕೇಂದ್ರದೊಳಗೆ ಹೋದೆ. ಕೊಠಡಿಯ ಕೊನೆಯ ಡೆಸ್ಕ್‌ನಲ್ಲಿ ನನ್ನ ನಂಬರ್ ಇತ್ತು. ಅಲ್ಲಿಯೇ ಮೊಬೈಲ್ ತೆರೆದು, ಗೂಗಲ್ ಲೆನ್ಸ್ ಸಹಾಯದಿಂದ ಸ್ಕ್ಯಾನ್ ಮಾಡಿ ಒಎಂಆರ್ ಪ್ರತಿ ಭರ್ತಿ ಮಾಡಿದೆ. ಇದನ್ನು ಯಾರೊಬ್ಬರೂ ಗಮನಿಸಲಿಲ್ಲ ಎಂದು ತನಿಖೆಯಲ್ಲಿ ಶಂಕರ್ ಹೇಳಿದ್ದಾನೆ ಎಂದು ಮೂಲಗಳು ತಿಳಿಸಿವೆ.

ಈ ಕುರಿತು ಜಿಲ್ಲಾಧಿಕಾರಿ ವಿಜಯ ಮಹಾಂತೇಶ್ ಅವರು ಮಾಹಿತಿ ನೀಡಿ, ಕೆಇಎ ಕಾರ್ಯನಿರ್ವಾಹಕ ಅಧಿಕಾರಿ ಪ್ರಸನ್ನ ಅವರ ಸೂಚನೆಯಂತೆ ಸವಣೂರು ಉಪ ವಿಭಾಗಾಧಿಕಾರಿ ಮೂಲಕ ವಿಚಾರಣೆ ನಡೆದಿದೆ. ಎರಡು ಮೂರು ದಿನಗಳಲ್ಲಿ ವರದಿ ನಮಗೆ ನೀಡುತ್ತಾರೆ. ವರದಿಯಲ್ಲಿ ಸತ್ಯಾಸತ್ಯತೆ ತಿಳಿಯಲಿದೆ ಎಂದು ತಿಳಿಸಿದ್ದಾರೆ.

ಕನ್ನಡ ರಾಜ್ಯೋತ್ಸವಕ್ಕೆ ಪ್ರಧಾನಿ ಮೋದಿ ಶುಭಾಶಯ: ಕನ್ನಡ ಸಂಸ್ಕೃತಿಗೆ ಮೆಚ್ಚುಗೆ

–(ಮೊದಲನೇ ಪುಟದಿಂದ..)

ನರೇಂದ್ರ ಮೋದಿಯವರು, ಕರ್ನಾಟಕವು ಶ್ರೀಮಂತ ಪರಂಪರೆ, ಗಮನಾರ್ಹ ಸಾಧನೆಗಳು ಹಾಗೂ ಅಪಾರ ಸಾಧ್ಯತೆಗಳನ್ನು ಹೊಂದಿರುವ ನಾಡು ಎಂದು ಬಣ್ಣಿಸಿದ್ದಾರೆ.

ಕರ್ನಾಟಕದ ವೈಭವೋಪೇತ ಪರಂಪರೆ ಮತ್ತು ಸಾರ್ವಕಾಲಿಕ ಆಚಾರ–ವಿಚಾರಗಳು ದೇಶದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಮತ್ತಷ್ಟು ಹೆಚ್ಚಿಸಿವೆ. ಇಲ್ಲಿನ ಜನರು ತಮ್ಮ ಕಠಿಣ ಪರಿಶ್ರಮ, ಉದ್ಯಮಶೀಲತೆ ಹಾಗೂ ಭವಿಷ್ಯದ ಕ್ಷೇತ್ರಗಳಲ್ಲಿನ ಕೌಶಲದಿಂದ ವಿಶಿಷ್ಟ ಛಾಪು ಮೂಡಿಸಿದ್ದಾರೆ ಎಂದು ಹೇಳಿದ್ದಾರೆ.

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಬಾಹ್ಯಾಕಾಶ, ಕೃತಕ ಬುದ್ಧಿಮತ್ತೆ, ಸುಧಾರಿತ ಉತ್ಪಾದನೆ ಮತ್ತು ನವೋದ್ಯಮ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಕರ್ನಾಟಕದ ಜನರು ತಮ್ಮ ಪ್ರತಿಭೆ ಹಾಗೂ ನೈಪುಣ್ಯವನ್ನು ಸಾಬೀತುಪಡಿಸಿದ್ದಾರೆ. ಜಾಗತಿಕ ಮಟ್ಟದ ಸಂಕೀರ್ಣ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳುವಲ್ಲಿ ಮುಂಚೂಣಿಯಲ್ಲಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಈ ವಿಶೇಷ ಸಂದರ್ಭವು ಕರ್ನಾಟಕದ ಜನರ ಜೀವನದಲ್ಲಿ ಸಂತಸ ಮತ್ತು ಸಮೃದ್ಧಿಯನ್ನು ತರಲಿ ಎಂದು ಮೋದಿ ಹಾರೈಸಿದ್ದಾರೆ.

ಇನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ಕನ್ನಡ ರಾಜ್ಯೋತ್ಸವದ ಶುಭ ಸಂದರ್ಭದಲ್ಲಿ ಕರ್ನಾಟಕದ ಸಹೋದರ ಮತ್ತು ಸಹೋದರಿಯರಿಗೆ ಹಾರ್ದಿಕ ಶುಭಾಶಯ ತಿಳಿಸಿದ್ದಾರೆ.

ವೈಭವೋಪೇತ ಇತಿಹಾಸ ಮತ್ತು ಶ್ರೀಮಂತ ಸಂಸ್ಕೃತಿಗೆ ಹೆಸರುವಾಸಿಯಾಗಿರುವ ಕರುನಾಡಿನ ಜನರು ತಮ್ಮ ಕಠಿಣ ಪರಿಶ್ರಮ ಹಾಗೂ ಭಾರತದ ಜಾಗತಿಕ ಸ್ಥಾನಮಾನ ಹೆಚ್ಚಿಸುವ ಕೊಡುಗೆಗಳ ಮೂಲಕ ನಾಡಿನ ಪರಂಪರೆಯನ್ನು ಬೆಳಗಿಸಿದ್ದಾರೆ ಎಂದು ಹೇಳಿದ್ದಾರೆ. ಕರ್ನಾಟಕದ ನಿರಂತರ ಪ್ರಗತಿಗಾಗಿ ಪ್ರಾರ್ಥಿಸುವುದಾಗಿ ತಿಳಿಸಿದ್ದಾರೆ.

ಕಬ್ಬಿನ ಎಸ್‌ಎಪಿ ಬಗ್ಗೆ ಸಿಎಂ ತೀರ್ಮಾನ ಮಾಡುತ್ತಾರೆ

–(ಮೊದಲನೇ ಪುಟದಿಂದ..)

ಕಮಿಟಿ ರಿಪೋರ್ಟ್‌ಗೆ ಕಾಯ್ತಾ ಇದ್ದೇವೆ. ಸಕ್ಕರೆ ದರ ಆಗ ಎಷ್ಟಿತ್ತು. ಈಗೆಷ್ಟಾಗಿದೆ ಎಂಬ ಬಗ್ಗೆ ಚರ್ಚೆ ಆಗಿದೆ. ನಿನ್ನೆ ಸಿಎಂ ಬಳಿಯೂ ಮಾತನಾಡಿದ್ದೇನೆ. ಸರ್ಕಾರ ರೈತರ ಪರ ಇದ್ದೇ ಇರುತ್ತೆ ಎಂದು ತಿಳಿಸಿದರು.

ಹೆಚ್ಚು ಜವಾಬ್ದಾರಿ ಕೇಂದ್ರ ಸರ್ಕಾರದ ಮೇಲಿದೆ. ಕೇಂದ್ರ ಸರ್ಕಾರ ಆದಷ್ಟು ಬೇಗ ಸಮಸ್ಯೆ ಬಗೆಹರಿಸಬೇಕು. ಎಸ್‌ಎಪಿ ಬಗ್ಗೆ ಸಿಎಂ ತೀರ್ಮಾನ ಮಾಡುತ್ತಾರೆ. ನಾನೂ ಇದರ ಬಗ್ಗೆ ಮಾತನಾಡುತ್ತೇನೆ. ಎಸ್

“ಹಿಂದೂಸ್ಥಾನ ನಿಮ್ಮ ಅಬ್ಬು ಜಾನ್ ಗೆ ಸೇರಿದ್ದಲ್ಲ”, ರಾಹುಲ್ ಗಾಂಧಿ ಮೊಘಲ್ ಚಕ್ರವರ್ತಿಯ ಮಗನಂತೆ ಮಾತಾಡ್ತಿದ್ದಾರೆ: ಬಿಜೆಪಿ ವ್ಯಂಗ್ಯ



ನವದೆಹಲಿ : ಭಾರತೀಯ ಜನತಾ ಪಕ್ಷವು ಭಾನುವಾರದಂದು ‘ಇಂಡಿಯನ್ ನ್ಯಾಷನಲ್ ಡೆವಲಪ್‌ಮೆಂಟಲ್ ಇನ್‌ಕ್ಲೂಸಿವ್ ಅಲೈಯನ್ಸ್’ ರ್ಯಾಲಿಯನ್ನು ‘ಅಸ್ತವ್ಯಸ್ತ ಮತ್ತು ಅವ್ಯವಸ್ಥಿತ ಪ್ರದರ್ಶನ’ ಎಂದು ಬಣ್ಣಿಸಿದೆ.

ಅಲ್ಲದೆ, ಪ್ರಧಾನಿ ನರೇಂದ್ರ ಮೋದಿ ಅವರ ಆಯ್ಕೆಯ ಕುರಿತು ರಾಹುಲ್ ಗಾಂಧಿ ನೀಡಿದ ಹೇಳಿಕೆಯನ್ನು ತೀವ್ರವಾಗಿ ಟೀಕಿಸಿರುವ ಬಿಜೆಪಿ, ಕಾಂಗ್ರೆಸ್ ನಾಯಕರು ‘ಮೊಘಲ್ ಚಕ್ರವರ್ತಿಯ ಮಗನಂತೆ’ ಮಾತನಾಡುತ್ತಿದ್ದಾರೆ ಎಂದು ಆರೋಪಿಸಿದೆ. 2024ರ ಚುನಾವಣೆಯನ್ನು ‘ಅಕ್ರಮ’ ಎಂದು ಕರೆದ ರಾಹುಲ್ ಗಾಂಧಿ ಅವರ ಹೇಳಿಕೆಗೆ ತಿರುಗೇಟು ನೀಡಿದ ಬಿಜೆಪಿ ವಕ್ತಾರ ಸಂಬಿತ್ ಪಾತ್ರ, “ಈ ಹಿಂದೂಸ್ಥಾನ್ ನಿಮ್ಮ ‘ಅಬ್ಬುಜಾನ್’ (ತಂದೆ) ಅವರದ್ದಲ್ಲ. ಇದು ಹಿಂದೂಸ್ಥಾನಿಗಳಿಗೆ ಸೇರಿದ್ದು,” ಎಂದು ಹೇಳಿದರು.

ಚುನಾವಣೆಯಲ್ಲಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ, ವಿರೋಧ ಪಕ್ಷಗಳ ಒಕ್ಕೂಟವಾದ ‘ಐಒಎಎಂ’ ಭಾನುವಾರ ರಾಷ್ಟ್ರ ರಾಜಧಾನಿಯಲ್ಲಿ ‘ವೋಟ್ ಬಚಾವೋ, ದೇಶ್ ಬಚಾವೋ’ (ಮತ ಉಳಿಸಿ, ದೇಶ ಉಳಿಸಿ) ಪ್ರತಿಭಟನೆಯನ್ನು ಆಯೋಜಿಸಿತ್ತು. ಈ ವೇಳೆ ರಾಹುಲ್ ಗಾಂಧಿ ಅವರು ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸಿದರು.

“ನರೇಂದ್ರ ಮೋದಿ ಎಲ್ಲಿಗೂ ಹೋಗುವುದಿಲ್ಲ ಎಂದು ಅಮಿತ್ ಶಾ ಹೇಳಿದ್ದಾರೆ. ಆದರೆ ನಾನು ಹೇಳುತ್ತೇನೆ, ನರೇಂದ್ರ ಮೋದಿ ಎಲ್ಲಿಗೂ ಹೋಗಲು ಸಾಧ್ಯವಿಲ್ಲ; ಅವರು ಹೋಗಲು ಬಯಸಿದರೂ, ನಾವು ಅವರನ್ನು ಬಿಡುವುದಿಲ್ಲ,” ಎಂದು ಗಾಂಧಿ ಹೇಳಿದರು. ಅಲ್ಲದೆ, ಇವರು ಕಾನೂನು ಕ್ರಮವನ್ನು ಎದುರಿಸಬೇಕಾಗುತ್ತದೆ ಮತ್ತು ಕಾನೂನಿನಿಂದ ತಪ್ಪಿಸಿಕೊಳ್ಳುವ ಬಗ್ಗೆ ಯೋಚಿಸಬಾರದು ಎಂದು ಎಚ್ಚರಿಸಿದರು. ನವದೆಹಲಿಯಲ್ಲಿರುವ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಂಬಿತ್ ಪಾತ್ರ, “ಅರಾಜಕತೆಯನ್ನು ಸೃಷ್ಟಿಸಲು ಕಾಂಗ್ರೆಸ್ ನಾಯಕರು ಇಲ್ಲದ ಸಮಸ್ಯೆಗಳನ್ನು ಹುಟ್ಟುಹಾಕುತ್ತಿದ್ದಾರೆ. ಅವರು ಹೀಗೆ ಮಾಡುತ್ತಿರುವವರೆಗೂ ಪ್ರಧಾನಿ ಮೋದಿ ಎಲ್ಲಿಗೂ ಹೋಗುವುದಿಲ್ಲ,” ಎಂದು ಹೇಳಿದರು.

ಕನ್ನಡ ನಾಡಿನ ಸಾಹಿತ್ಯ ಸಂಸ್ಕೃತಿ ಪರಂಪರೆಗೆ ಗದಗಿನ ಕೊಡುಗೆ ಅಪಾರ

ಗದಗ: ಕರ್ನಾಟಕ ಏಕೀಕರಣದ ಹೋರಾಟದಲ್ಲಿ ಗದಗಿನ ಮಹನೀಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕನ್ನಡ ನಾಡಿನ ಸಾಹಿತ್ಯ, ಸಂಸ್ಕೃತಿ ಹಾಗೂ ಪರಂಪರೆಯ ಶ್ರೀಮಂತಿಕೆಗೆ ಗದಗಿನ ಕೊಡುಗೆ ಅಪಾರವಾಗಿದೆ. ಕನ್ನಡ ಭಾಷೆ ಮತ್ತು ನಾಡಿನ ಅಸ್ಮಿತೆಯನ್ನು ಉಳಿಸಿ ಬೆಳೆಸುವಲ್ಲಿ ಗದಗಿನ ಸಾಹಿತಿಗಳು, ಕಲಾವಿದರು ಹಾಗೂ ಹೋರಾಟಗಾರರ ಸೇವೆ ಸ್ಮರಣೀಯವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ ಹೇಳಿದರು.

ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ರವಿವಾರ ಜಿಲ್ಲಾಡಳಿತದಿಂದ ಏರ್ಪಡಿಸಿದ್ದ 71 ನೇಯ ಕನ್ನಡ ರಾಜ್ಯೋತ್ಸವದ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿ ಸಚಿವರು ಮಾತನಾಡಿದರು.

“ಉದಯವಾಗಲಿ ನಮ್ಮ ಚಲುವ ಕನ್ನಡ ನಾಡು ಬದುಕು ಬಲುಹಿನ ನಿಧಿಯು ಸದಭಿಮಾನದ ಗೂಡು ” ಎಂದು ಗದುಗಿನ ಹುಯಿಲಗೋಳ ನಾರಾಯಣರಾಯರು ಕನಸು ಕಂಡಂತೆ “ ತಾಯೆ ಬಾರ ಮೊಗವ ತೋರ ಕನ್ನಡಿಗರ ಮಾತೆಯೆ, ಹರಸು ತಾಯೆ ಸುತರ ಕಾಯೆ ನಮ್ಮ ಜನ್ಮದಾತೆಯೆ” ಎಂದು ಕನ್ನಡಾಂಬೆಯನ್ನು ಆಹ್ವಾನಿಸಿ ನಮ್ಮೆಲ್ಲರನ್ನು ಏಕೀಕರಣಕ್ಕಾಗಿ ಒಗ್ಗೂಡುವಂತೆ ಅನೇಕ ಮಹನೀಯರು ಹೋರಾಡಿದ ಫಲಶ್ರುತಿಯಾಗಿ ಹರಿದು ಹಂಚಿಹೋಗಿದ್ದ ಈ ರಾಜ್ಯವು 1956 ರಲ್ಲಿ ಮೈಸೂರು ರಾಜ್ಯ ಉದಯವಾಯಿತು ಎಂದು ಹೇಳಿದರು.

ಕೊಡಗು, ಮದ್ರಾಸ್, ಹೈದರಾಬಾದ ಹಾಗೂ ಬಾಂಬೆ ಕರ್ನಾಟಕ ರಾಜ್ಯದ ಭಾಗಗಳನ್ನು ಮೈಸೂರು ರಾಜ್ಯಕ್ಕೆ ಸೇರ್ಪಡಿಸಲಾಯಿತು. ಈ ಪ್ರದೇಶಗಳಲ್ಲಿ ಬಹಳಷ್ಟು ಜನರು ಕನ್ನಡ ಭಾಷೆಯನ್ನು ಮಾತನಾಡುತ್ತಿದ್ದರಿಂದ ಹಾಗೂ ಭಾಷಾವಾರು ಪ್ರಾಂತ್ಯ ನಿರ್ಮಾಣವಾಗಬೇಕೆಂದು ಕರ್ನಾಟಕ ಏಕೀಕರಣ ಚಳುವಳಿಯ ಉದ್ದೇಶವಾಗಿದ್ದರಿಂದ ಮೈಸೂರುರಾಜ್ಯವನ್ನು 1973 ನವೆಂಬರ 01 ರಂದು ಕರ್ನಾಟಕ ರಾಜ್ಯವೆಂದು ಪುನರ್ ನಾಮಕರಣ ಮಾಡಲಾಯಿತು. ಏಕೀಕರಣದಲ್ಲಿ ಕನ್ನಡ ಕುಲಪುರೋಹಿತ ಆಲೂರು ವೆಂಕಟರಾವ್ , ಅಂದಾನಪ್ಪ ದೊಡ್ಡಮೇಟಿ, ಕೆ.ಎಚ್.ಪಾಟೀಲ ಅವರನ್ನು ಗೌರವದಿಂದ ಸ್ಮರಿಸೋಣ ಎಂದರು.

ಈ ನಾಡಿನಲ್ಲಿ ಕದಂಬರು, ರಾಷ್ಟ್ರಕೂಟರು



ವಿಜಯನಗರದ ಅರಸರು, ಚಾಲುಕ್ಯರು ಸೇರಿದಂತೆ ಹಲವಾರು ರಾಜರುಗಳು ಆಳ್ವಿಕೆ ನಡೆಸಿದ್ದಾರೆ. ನರ್ಮದಾ ನದಿಯಿಂದ ಕಾವೇರಿ ವರೆಗೆ ಕನ್ನಡ ನಾಡು ಹರಡಿದ್ದು ಅನೇಕ ವಿಸ್ಮಯಗಳಿಂದ ಕನ್ನಡ ನಾಡು ಕೂಡಿದೆ. ಗದಗ ಜಿಲ್ಲೆಯ ಜಗದ್ಗುರು ಡಾ.ಅನ್ನದಾನೇಶ್ವರ ಮಹಾಶಿವಯೋಗಿಗಳಿಗೆ ಸಮಾಜ ಸೇವೆ ಹಾಗೂ ಪಾಂಡಪ್ಪ ದೇವಲಪ್ಪ ಲಮಾಣಿ ಅವರಿಗೆ ಜನಪದ ಕ್ಷೇತ್ರದಲ್ಲಿನ ಸಾಧನೆ ಪರಿಗಣಿಸಿ ಪ್ರಸಕ್ತ ಸಾಲಿನ ರಾಜ್ಯೋತ್ಸವ ಪ್ರಶಸ್ತಿ ಬಂದಿದ್ದು ಅವರಿಗೆ ಶುಭ ಕೋರಿದರು.

ಜಿಲ್ಲೆಯ ಅಭಿವೃದ್ಧಿಯಡೆಗೆ ಮಾತನಾಡುವುದಾದರೆ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಜಿಲ್ಲೆಯ ಅಸಂಖ್ಯಾತ ಕುಟುಂಬಗಳಿಗೆ ಆರ್ಥಿಕ ಭದ್ರತೆ ಒದಗಿಸಿದ ಕೀರ್ತಿ ರಾಜ್ಯ ಸರ್ಕಾರಕ್ಕೆ ಸಲ್ಲುತ್ತದೆ. ರಾಜ್ಯ ಸರ್ಕಾರವು ನೀಡಿದ ಭರವಸೆಗಳನ್ನು ಸಮರ್ಪಕವಾಗಿ ಈಡೇರಿಸಿದೆ. ಗ್ಯಾರಂಟಿಗಳ ಅನುಷ್ಠಾನಕ್ಕೆ ಅನುದಾನದ ಕೊರತೆ ಇಲ್ಲ. ರಾಜ್ಯದಲ್ಲಿ ಗ್ಯಾರಂಟಿಗಳ ಅನುಷ್ಠಾನಕ್ಕಾಗಿಯೇ 52 ಸಾವಿರ ಕೋಟಿಗೂ ಅಧಿಕ ಅನುದಾನ ಪ್ರತಿ ವರ್ಷ ನೀಡಲಾಗುತ್ತಿದೆ. 36.10 ಲಕ್ಷ ರೈತರ ಪಂಪ ಸೆಟ್ ಗಳಿಗೆ ಉಚಿತ ವಿದ್ಯುತ್ ನೀಡುವ ಮೂಲಕ ರೈತರ ಆರ್ಥಿಕಾಭಿವೃದ್ಧಿಗೆ ಶ್ರಮಿಸುತ್ತಿದೆ. ಅಲ್ಲದೇ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 5 ಲಕ್ಷ ರೂ.ಗಳವರೆಗೆ ಸಾಲ ಒದಗಿಸಲಾಗುತ್ತಿದೆ. ಒಟ್ಟಾರೆ 1.20 ಲಕ್ಷ ಕೋಟಿ ಅನುದಾನವನ್ನು ನೇರ ಸಬ್ಸಿಡಿ ಮೂಲಕ ಸರ್ಕಾರ ನೀಡುತ್ತಿದೆ ಎಂದರು.

ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಡಾ.ಎಚ್.ಕೆ.ಪಾಟೀಲ ಅವರು ಗದಗ ಜಿಲ್ಲೆಯ ಪ್ರದೇಶ ಕನ್ನಡ ನಾಡು ಕಲೆ, ಸಾಹಿತ್ಯ, ಸಂಸ್ಕೃತಿ, ಶಿಕ್ಷಣ ಹಾಗೂ ಸಂಗೀತ ಕ್ಷೇತ್ರದ ಬೀಡಾಗಿದೆ. ಗದುಗಿನ ವೀರನಾರಾಯಣ–ತ್ರಿಕೂಟೇಶ್ವರ ದೇವಾಲಯಗಳು, ಲಕ್ಕುಂಡಿ ಜಿನಾಲಯಗಳು, ಡಂಬಳದ ದೊಡ್ಡ ಬಸವೇಶ್ವರ ದೇವಾಲಯ, ಸೂಡಿಯ ಜೋಡು ಕಳಸದ ದೇವಾಲಯ, ದಾನ ಚಿಂತಾಮಣಿ ಅತ್ತಿಮಬ್ಬೆ ಸ್ಮಾರಕಗಳ ಶಿಲ್ಪಕಲೆ ಮೈ–ಮನಗಳನ್ನು ಮುದಗೊಳಿಸುತ್ತದೆ ಮತ್ತು ಪಂಡಿತ್ ಪುಟ್ಟರಾಜ ಗವಾಯಿಗಳವರ ಆಶ್ರಮದ ಸಂಗೀತ ನಿನಾದ ನಮ್ಮಲ್ಲಿ ಧನ್ಯತಾ ಭಾವವನ್ನು ಜಾಗೃತಗೊಳಿಸುತ್ತದೆ. ಇದು ನಮ್ಮ ಹೆಮ್ಮೆ ಎಂದರು. ಮುಂದುವರೆದು ಗದಗಿನ ಕೀರ್ತಿಯನ್ನು ಅಂತರಾಷ್ಟ್ರೀಯ ಮಟ್ಟಕ್ಕೇರಿಸಿದ ಹುಯಿಲಗೋಳ ನಾರಾಯಣ–ರಾಯರು, ಡಾ.ಎಂ.ಎಸ್.ಸುಂಕಾಪುರ, ಪ್ರೋ. ಕೀರ್ತಿನಾಥ ಕುರ್ತಕೋಟಿ, ಡಾ.ಚನ್ನವೀರ ಕಣವಿ, ಡಾ.ಎನ್.ಕೆ.ಕುಲಕರ್ಣಿ, ಶ್ರೀ ಮಾಧವ ಕುಲಕರ್ಣಿ, ಡಾ.ಎಚ್.ಎನ್.ಹೂಗಾರ, ಶ್ರೀ ಭೂಸನೂರಮಠ, ಹಿಂದೂಸ್ಥಾನಿ ಗಾಯಕ ಭಾರತ ರತ್ನ ಪುರಸ್ಕೃತ ಪಂಡಿತ್ ಭೀಮಸೇನ ಜೋಶಿಯವರು, ಸಂಗೀತ ದಿಗ್ಗಜರಾದ ಪಂಚಾಕ್ಷರಿ ಗವಾಯಿಗಳು ಮತ್ತು ವಿಕಲಚೇತನರ ಬಾಳಿನ ಬೆಳಕಾದ ಡಾ.ಪುಟ್ಟರಾಜ ಗವಾಯಿಗಳು ಹೀಗೆ ಅನೇಕ ಸಾಧಕರು ಗದಗಿನ ಹೆಮ್ಮೆಯಾಗಿದ್ದಾರೆ.

ಕರ್ನಾಟಕ ಏಕೀಕರಣ ಸೇರಿದಂತೆ, ಕರ್ನಾಟಕದ ಕಲೆ, ಸಾಹಿತ್ಯ, ಸಂಸ್ಕೃತಿಗೆ ಜಿಲ್ಲೆಯ ಕೊಡುಗೆ ಅಪಾರ, ಜಿಲ್ಲೆಯ ಐತಿಹಾಸಿಕ, ರಾಜಕೀಯ, ಆರ್ಥಿಕ, ಕೃಷಿ, ಜಾನಪದ, ಎಲ್ಲಾ ಕ್ಷೇತ್ರಗಳಲ್ಲಿಯೂ ವಿವಿಧ ಕಾಲಘಟ್ಟಗಳಲ್ಲಿ ಮತ್ತು ಆಯಾಮಗಳಲ್ಲಿ ಪ್ರಗತಿ ಸಾಧಿಸುತ್ತಾ ಬಂದಿದ್ದು, ತಮ್ಮದೇ ಆದ ಕೊಡುಗೆಗಳನ್ನು ನೀಡುತ್ತಾ ಬಂದಿವೆ.

ಅವಳಿ ನಗರದ ಕುಡಿಯುವ ನೀರಿಗಾಗಿ ಸರ್ಕಾರ 59.88 ಕೋಟಿ ಅನುದಾನ ಒದಗಿಸಿದೆ. ಇದರಿಂದ ಹಮ್ಮಿಗಿ ಪಂಪ ಹೌಸ್ ಹಾಗೂ 5 ಟ್ಯಾಂಕ್ ನಿರ್ಮಾಣ ಗೊಳ್ಳಲಿದ್ದು ಟೆಂಡರ್ ಪ್ರಕ್ರಿಯೆ ಆರಂಭವಾಗಿದೆ. ಅಲ್ಲದೇ ಪಾಪನಾಶಿಯ ಡಬ್ಲು ಟಿ ಪಿ ಯಿಂದ ಜೆ ಟಿ ಕಾಲೇಜ್ ವರೆಗೆ ಪೈಪ್ ಅಳವಡಿಕೆ ಕಾಮಗಾರಿಗಾಗಿ 26.33 ಕೋಟಿ ಅನುದಾನ ಮಂಜೂರಾಗಿದೆ. ಈ ಕಾಮಗಾರಿಗಳ ಅನುಷ್ಠಾನದಿಂದ ನೀರಿನ ಸಮಸ್ಯೆ ಶಾಶ್ವತ ಪರಿಹಾರವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ಅಭಿವೃದ್ಧಿಗಾಗಿ ಸಚಿವ ಬಸವರಾಜ ರಾಯರಡ್ಡಿ ಅವರು ಉನ್ನತ ಶಿಕ್ಷಣ ಇಲಾಖೆಯಿಂದ 5 ಕೋಟಿ ರೂ. ನೀಡಿದ್ದಾರೆ. ಅವರಿಗೆ ಅಭಿನಂದನೆಗಳು ಎಂದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್.ಪಾಟೀಲ, ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್, ಡಿಎಫ್ಓ ಸಂತೋಷಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಎಚ್. ಎನ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಎಸಿ ಗಂಗಪ್ಪ ಎಂ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಅಪಾರ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಇದ್ದರು

ಕನ್ನಡ ನಾಡು-ನುಡಿಯ ಸಂಸ್ಕೃತಿ ಉಳಿಸಿ ಬೆಳೆಸುವುದು ನಮ್ಮೆಲ್ಲರ ಕರ್ತವ್ಯ: ಶಾಸಕ ಹೆಚ್.ವಿ. ವೆಂಕಟೇಶ್

ಗಡಿನಾಡು ಪಾವಗಡದಲ್ಲಿ 71ನೇ ಕನ್ನಡ ರಾಜ್ಯೋತ್ಸವ ಸಂಭ್ರಮ; ತಾಲೂಕಿನ ಸಮಗ್ರ ಅಭಿವೃದ್ಧಿಗೆ ಬದ್ಧ, ಪ್ರತಿ ಪಂಚಾಯಿತಿಗೆ 1 ಕೋಟಿ ಅನುದಾನ ಘೋಷಣೆ

ಪಾವಗಡ: ಕನ್ನಡ ನಾಡು, ನುಡಿ, ಭಾಷೆ, ಕಲೆ, ಸಾಹಿತ್ಯ ಹಾಗೂ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯವಾಗಿದೆ ಎಂದು ತುಮಕೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷರು ಹಾಗೂ ಶಾಸಕ ಹೆಚ್.ವಿ. ವೆಂಕಟೇಶ್ ತಿಳಿಸಿದರು.

ಪಟ್ಟಣದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕರ್ನಾಟಕದಲ್ಲಿ ಜನಿಸಿರುವುದೇ ನಮ್ಮೆಲ್ಲರ ಪುಣ್ಯ. ಪಾವಗಡ ತಾಲೂಕು ಆಂಧ್ರಪ್ರದೇಶದ ಗಡಿಗೆ ಹೊಂದಿಕೊಂಡಿದ್ದು, ಮಡಕಶಿರಾ, ಹಿಂದೂಪುರ, ಕಲ್ಯಾಣದುರ್ಗ ಹಾಗೂ ಅಮರಾಪುರ ಪ್ರದೇಶಗಳಿಂದ ಸುತ್ತುವರಿದಿದ್ದರೂ ಗಡಿನಾಡಿನಲ್ಲಿ ಕನ್ನಡ ಭಾಷೆ ಅಚ್ಚಳಿಯದೆ ಉಳಿದು ಬೆಳೆದು ಬರುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು. ತಾಲೂಕಿನ ಅಭಿವೃದ್ಧಿಗೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಶಿಕ್ಷಕರು ಶಾಲೆಗಳಲ್ಲಿ ಮಕ್ಕಳನ್ನು ತಮ್ಮ ಸ್ವಂತ



ಮಕ್ಕಳಂತೆ ಭಾವಿಸಿ ಗುಣಮಟ್ಟದ ಶಿಕ್ಷಣ ನೀಡಬೇಕು. ಶಿಕ್ಷಣದ ಮೂಲಕ ಮಕ್ಕಳ ಭವಿಷ್ಯ ರೂಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ಹೇಳಿದರು. ಪಾವಗಡ ತಾಲೂಕಿನ ಸಮಗ್ರ ಅಭಿವೃದ್ಧಿಗೆ ತಾವು ಬದ್ಧರಾಗಿದ್ದು, ಕ್ರೀಡಾಂಗಣದ ಅಭಿವೃದ್ಧಿ, ಪಟ್ಟಣದ ಪ್ರಮುಖ ರಸ್ತೆಗಳ ಅಗಲೀಕರಣ ಹಾಗೂ ಪಟ್ಟಣವನ್ನು ಸುಂದರ ನಗರವನ್ನಾಗಿ ರೂಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ತುಂಗಭದ್ರಾ ಕುಡಿಯುವ ನೀರಿನ ಯೋಜನೆಯ ಮಾದರಿಯಲ್ಲಿ ಮುಂದಿನ ದಿನಗಳಲ್ಲಿ ತಾಲೂಕಿನ ಕೆರೆಗಳಿಗೆ ನೀರು ಹರಿಸುವ ಯೋಜನೆ ರೂಪಿಸಲಾಗುತ್ತಿದೆ. ಈ ಯೋಜನೆಯ ಉದ್ಘಾಟನೆಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಆಹ್ವಾನಿಸಲಾಗುವುದು. ತಾಲೂಕಿನ ಪ್ರತಿ ಗ್ರಾಮ ಪಂಚಾಯಿತಿಗೆ ತಲಾ 1 ಕೋಟಿ ಅನುದಾನ ಮಂಜೂರು ಮಾಡಲಾಗಿದ್ದು, ಇದರಿಂದ ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ, ಕುಡಿಯುವ ನೀರು, ಚರಂಡಿ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಅನುಕೂಲವಾಗಲಿದೆ ಎಂದು ಶಾಸಕ ಹೆಚ್.ವಿ. ವೆಂಕಟೇಶ್ ತಿಳಿಸಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ವೈ. ರವಿ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಕನ್ನಡದ ಕಂಪು ರಾಜ್ಯದ ಮೂಲೆ ಮೂಲೆಗಳಲ್ಲಿಯೂ ಪಸರಿಸಬೇಕು. ಅನೇಕ ಕನ್ನಡಪರ ಹೋರಾಟಗಾರರ ಪರಿಶ್ರಮ ಮತ್ತು ತ್ಯಾಗದ ಫಲವಾಗಿ ಕನ್ನಡ ಮಾತನಾಡುವ ಪ್ರದೇಶಗಳನ್ನು ಒಗ್ಗೂಡಿಸಿ ಮೈಸೂರು ರಾಜ್ಯ ನಿರ್ಮಾಣವಾಯಿತು. ನಂತರ 1973ರ ನವೆಂಬರ್ 1ರಂದು ದೇವರಾಜ ಅರಸು ಅವರ ಮುಖ್ಯಮಂತ್ರಿತ್ವದ ಅವಧಿಯಲ್ಲಿ ಕರ್ನಾಟಕ ಎಂದು ನಾಮಕರಣ ಮಾಡಲಾಯಿತು ಎಂದು ಸ್ಮರಿಸಿದರು.

ಪಾವಗಡ ತಾಲೂಕು ಆಂಧ್ರಪ್ರದೇಶದ ಗಡಿಗಳಿಂದ ಸುತ್ತುವರಿದಿದ್ದರೂ ಕನ್ನಡ ಭಾಷೆ ಹಾಗೂ ಸಂಸ್ಕೃತಿ ಇಲ್ಲಿ ತನ್ನ ಅಸ್ತಿತ್ವವನ್ನು ಉಳಿಸಿಕೊಂಡಿದೆ. ಮಡಕಶಿರಾ, ಹಿಂದೂಪುರ, ಕಲ್ಯಾಣದುರ್ಗ ಮತ್ತು ಅಮರಾಪುರ ಗಡಿಗಳ ನಡುವೆಯೂ ಕನ್ನಡಿಗರು ತಮ್ಮ ಭಾಷಾಭಿಮಾನವನ್ನು ಕಾಪಾಡಿಕೊಂಡು ಬಂದಿರುವುದು ಸಂತಸದ ಸಂಗತಿ. ಕನ್ನಡ ಕೇವಲ ಮಾತನಾಡುವ ಭಾಷೆಯಾಗದೆ ನಮ್ಮ ಉಸಿರು ಹಾಗೂ ಜೀವನ ಸಂಸ್ಕೃತಿಯಾಗಬೇಕು. ಮುಂದಿನ ಪೀಳಿಗೆಗೂ ಕನ್ನಡದ ಮಹತ್ವವನ್ನು ತಿಳಿಸುವ ಮೂಲಕ ಭಾಷೆಯನ್ನು ಉಳಿಸಿ ಬೆಳೆಸಬೇಕು ಎಂದು ಕರೆ ನೀಡಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಕಟ್ಟಾ ನರಸಿಂಹಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಿ, ಈ ಬಾರಿ ಪಾವಗಡ ತಾಲೂಕಿನ ಐವರು ಸಾಧಕರಿಗೆ ತುಮಕೂರು ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಲಭಿಸಿರುವುದು ಹೆಮ್ಮೆಯ ಸಂಗತಿಯಾಗಿದೆ.

ಕನ್ನಡ ನಾಡು, ನುಡಿ, ಸಂಸ್ಕೃತಿ ರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಿ: ಸಚಿವ ಬಸವಂತಪ್ಪ

14 ಸಾಧಕರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ; ಕನ್ನಡ ಗೀತೆಗಳಿಗೆ ವಿದ್ಯಾರ್ಥಿಗಳ ಮನಮೋಹಕ ನೃತ್ಯ

1ನೇ ಪುಟದಿಂದ....

ಪ್ರಶಸ್ತಿಗಳನ್ನು ಪಡೆದಿರುವ ಹೆಗ್ಗಳಿಕೆ ಕನ್ನಡ ಭಾಷೆಗಿದ್ದು, ಇದು ಪ್ರತಿಯೊಬ್ಬ ಕನ್ನಡಿಗನಿಗೂ ಹೆಮ್ಮೆಯ ಸಂಗತಿಯಾಗಿದೆ ಎಂದರು.

ವಿಜಯನಗರ ಸಾಮ್ರಾಜ್ಯ ಭಾರತದ ಇತಿಹಾಸದಲ್ಲಿ ಸುವರ್ಣ ಯುಗವನ್ನು ಸೃಷ್ಟಿಸ

ಮಹನೀಯರ ಹೋರಾಟದ ಫಲವಾಗಿ ಒಂದಾದ ಕನ್ನಡ ನಾಡು-ನುಡಿಯನ್ನು ಸಂರಕ್ಷಿಸೋಣ: ಅಮರೇಶ್ ಜಿ.ಕೆ.

ಕನ್ನಡದ ಶ್ರೀಮಂತ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಎಲ್ಲರ ಕರ್ತವ್ಯ



ಕೊಟ್ಟೂರು : ಅನೇಕ ಮಹನೀಯರ ತ್ಯಾಗ, ಹೋರಾಟ ಮತ್ತು ಪರಿಶ್ರಮದ ಫಲವಾಗಿ ಏಕೀಕೃತ ಕರ್ನಾಟಕ ನಿರ್ಮಾಣವಾಗಿದೆ. ಇಂತಹ ನಾಡು, ನುಡಿ, ಭಾಷೆ ಹಾಗೂ ಸಂಸ್ಕೃತಿಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿಯಾಗಿದೆ ಎಂದು ತಹಶೀಲ್ದಾರ್ ಅಮರೇಶ್ ಜಿ.ಕೆ. ಹೇಳಿದರು.

ಪಟ್ಟಣದ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಹಾಗೂ ಪಟ್ಟಣ ಪಂಚಾಯಿತಿ ವತಿಯಿಂದ ಆಯೋಜಿಸಿದ್ದ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಇಂಗ್ಲಿಷ್ ಸೇರಿದಂತೆ ಇತರ ಭಾಷೆಗಳನ್ನು ಕಲಿಯುವುದರ ಜೊತೆಗೆ ಮಾತೃಭಾಷೆ ಕನ್ನಡವನ್ನು ಮರೆಯಬಾರದು. ಮನೆ, ಶಾಲೆ ಹಾಗೂ ಸಮಾಜದಲ್ಲಿ ಕನ್ನಡ ಬಳಕೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

ಉಪನ್ಯಾಸಕ ಅರವಿಂದ ಬಸಾಪುರ ಮಾತನಾಡಿ, ಕನ್ನಡ ಭಾಷೆಗೆ ಎರಡು ಸಾವಿರ ವರ್ಷಗಳಿಗೂ ಹೆಚ್ಚಿನ ಇತಿಹಾಸವಿದ್ದು, ಪಂಪ, ರನ್ನ, ಪೊನ್ನ ಸೇರಿದಂತೆ ಅನೇಕ ಸಾಹಿತಿಗಳು ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ. ವಿದ್ಯಾರ್ಥಿಗಳು ಕನ್ನಡ ಸಾಹಿತ್ಯ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದರು.

ಕನ್ನಡ ನಾಡು ಹಿತರಕ್ಷಣಾ ಸಮಿತಿಯ ಜಿಲ್ಲಾ ಅಧ್ಯಕ್ಷ ಡಾ. ಎ.ಕೆ. ಬಸವರಾಜ ಮಾತನಾಡಿ, ಕನ್ನಡದ ಮೇಲಿನ ಅಭಿಮಾನ ಮಾತುಗಳಿಗೆ ಸೀಮಿತವಾಗದೆ ದೈನಂದಿನ ಬದುಕಿನಲ್ಲಿ ಕನ್ನಡ ಬಳಕೆಯಾಗಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಕಿ ಬಸವರಾಶ್ವರಿ ಹಾಗೂ ಕನ್ನಡ ಉಪನ್ಯಾಸಕಿ ಸಿಂಧು ಗಿರೀಶ ಅವರನ್ನು ಸನ್ಮಾನಿಸಲಾಯಿತು. ತಾಯಿ ಭುವನೇಶ್ವರಿಯ ಭಾವಚಿತ್ರದೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಯಿತು. ವಿಸ್ಡಂ ಎರಾ ಶಾಲೆಯ ವಿದ್ಯಾರ್ಥಿಗಳು ಒನಕೆ ಓಬವ್ವನ ಶೌರ್ಯವನ್ನು ಬಿಂಬಿಸುವ ಗೀತನೃತ್ಯ ಪ್ರದರ್ಶಿಸಿ ಗಮನ ಸೆಳೆದರು. ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಇಒ ಡಾ. ಆನಂದಕುಮಾರ್, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎ. ನಸರುಲ್ಲಾ, ಪೊಲೀಸ್ ಇನ್ಸ್‌ಪೆಕ್ಟರ್ ಕೆ. ದುರುಗಪ್ಪ, ಕಸಾಪ ಅಧ್ಯಕ್ಷ ದೇವರಮನಿ ಕೊಟ್ರೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಅನುರಾಧ ವಾಲ್ಮೀಕಿ ಅವರಿಗೆ 'ಭಾರತರತ್ನ ಮದರ್ ತೆರೇಸಾ ಅವಾರ್ಡ್-2026' ಪ್ರದಾನ



ಬೆಂಗಳೂರು : ಸಮಾಜಸೇವೆ, ಮಹಿಳಾ ಸಬಲೀಕರಣ ಹಾಗೂ ಕಲಾ ಕ್ಷೇತ್ರದಲ್ಲಿ ಸಲ್ಲಿಸಿರುವ ನಿಸ್ವಾರ್ಥ ಸೇವೆಯನ್ನು ಗುರುತಿಸಿ ಶ್ರೀ ವಾಲ್ಮೀಕಿ ಮಹಿಳಾ ಕಲಾ ಸಂಸ್ಥೆಯ ಅಧ್ಯಕ್ಷೆ ಅನುರಾಧ ವಾಲ್ಮೀಕಿ ಅವರಿಗೆ ಪ್ರತಿಷ್ಠಿತ 'ಭಾರತರತ್ನ ಮದರ್ ತೆರೇಸಾ ಅವಾರ್ಡ್-2026' ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಬೆಂಗಳೂರಿನ ಯಲಹಂಕದಲ್ಲಿ ಟಿವಿ4 ಕನ್ನಡ ನ್ಯೂಸ್ ಚಾನೆಲ್ ಹಾಗೂ ಶ್ರೀ ಶಿರಡಿ ಸಾಯಿ ದೀಪ ಚಾರಿಟೇಬಲ್ ಟ್ರಸ್ಟ್ ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಟಿವಿ4 ಕನ್ನಡ ನ್ಯೂಸ್ ಚಾನೆಲ್ ಸಂಸ್ಥಾಪಕ ಡಾ. ಸಾಯಿ ಸತೀಶ್ ತೋಟಯ್ಯ ಹಾಗೂ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತೆ ಸಯೋಜಾತ ಶಾಸ್ತ್ರಿ ಹಿರೇಮಠ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಸಾಯಿ ಸತೀಶ್, ಅನುರಾಧ ವಾಲ್ಮೀಕಿ ಅವರು ಶ್ರೀ ವಾಲ್ಮೀಕಿ ಮಹಿಳಾ ಕಲಾ ಸಂಸ್ಥೆಯ ಮೂಲಕ ಮಹಿಳಾ ಸಬಲೀಕರಣ, ಜಾನಪದ ಕಲೆ ಹಾಗೂ ಸಾಂಸ್ಕೃತಿಕ ಪರಂಪರೆಯ ಉಳಿವಿಗಾಗಿ ಸುದೀರ್ಘ ಕಾಲದಿಂದ ಶ್ರಮಿಸುತ್ತಿದ್ದಾರೆ. ಗ್ರಾಮೀಣ ಮತ್ತು ಹಿಂದುಳಿದ ವರ್ಗಗಳ ಮಹಿಳಾ ಕಲಾವಿದರಿಗೆ ಸೂಕ್ತ ವೇದಿಕೆ ಕಲ್ಪಿಸುವುದು, ಸಾಂಸ್ಕೃತಿಕ ತರಬೇತಿ ನೀಡುವುದು ಹಾಗೂ ಸ್ವಾವಲಂಬಿಗಳಾಗಲು ಪ್ರೋತ್ಸಾಹಿಸುವ ಕಾರ್ಯಗಳನ್ನು ನಿರಂತರವಾಗಿ ಮಾಡುತ್ತಿದ್ದಾರೆ. ಅವರ ಸಮಾಜಮುಖಿ ಸೇವೆ ಮತ್ತು ಕಲಾ ಕ್ಷೇತ್ರದ ಕೊಡುಗೆಯನ್ನು ಗುರುತಿಸಿ ಈ ಪ್ರಶಸ್ತಿ ನೀಡಲಾಗಿದೆ ಎಂದು ತಿಳಿಸಿದರು.

ಆರ್.ವೈ.ಎಂ.ಇ.ಸಿ.ಯಲ್ಲಿ ಕ್ಯಾಂಪಸ್ ನೇಮಕಾತಿ ಸಾಧನೆ: ಕೇವಲ ಮೂರು ದಿನಗಳಲ್ಲಿ 151 ವಿದ್ಯಾರ್ಥಿಗಳಿಗೆ ಉದ್ಯೋಗ



ಬಳ್ಳಾರಿ : ನಗರದ ಪ್ರತಿಷ್ಠಿತ ವೀರಶೈವ ವಿದ್ಯಾವರ್ಧಕ ಸಂಘದ ರಾವ್ ಬಹದ್ದೂರ್ ವ್ಯಾಸ ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜು (ಆರ್.ವೈ.ಎಂ.ಇ.ಸಿ.) ಪ್ರಸಕ್ತ ಶೈಕ್ಷಣಿಕ ಸಾಲಿನ ಕ್ಯಾಂಪಸ್ ನೇಮಕಾತಿ ಪ್ರಕ್ರಿಯೆಯಲ್ಲಿ ಗಮನಾರ್ಹ ಸಾಧನೆ ಮಾಡಿದೆ. ಕಾಲೇಜಿನಲ್ಲಿ ಕಳೆದ ಮೂರು ದಿನಗಳಿಂದ ನಿರಂತರವಾಗಿ ನಡೆದ ನೇಮಕಾತಿ ಪ್ರಕ್ರಿಯೆಯಲ್ಲಿ ವಿವಿಧ ಪ್ರತಿಷ್ಠಿತ ಕಂಪನಿಗಳು ಒಟ್ಟು 151 ವಿದ್ಯಾರ್ಥಿಗಳನ್ನು ಉದ್ಯೋಗಕ್ಕೆ ಆಯ್ಕೆ ಮಾಡಿಕೊಂಡಿವೆ ಎಂದು ಸಂಘದ ಉಪಾಧ್ಯಕ್ಷರು ಹಾಗೂ ಕಾಲೇಜಿನ ಅಧ್ಯಕ್ಷ ಜಾನಕುಂಟೆ ಬಸವರಾಜ್ ತಿಳಿಸಿದ್ದಾರೆ. ಈ ಬಾರಿಯ ನೇಮಕಾತಿಯಲ್ಲಿ ವಿಶೇಷವಾಗಿ ಕೋರ್ ಇಂಜಿನಿಯರಿಂಗ್ ವಿಭಾಗಗಳಾದ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ (ಇಇಇ), ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್ (ಇಇಇ) ಹಾಗೂ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗಾವಕಾಶ ಪಡೆದುಕೊಂಡಿರುವುದು ಕಾಲೇಜಿನ ಶೈಕ್ಷಣಿಕ ಸಾಧನೆಗೆ ಸಾಕ್ಷಿಯಾಗಿದೆ.

L.S. Automotive, TVS Brakes India ಹಾಗೂ Accord Software & System ಸೇರಿದಂತೆ ಪ್ರತಿಷ್ಠಿತ ಕಂಪನಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡಿವೆ. ವಿದ್ಯಾರ್ಥಿಗಳ ತಾಂತ್ರಿಕ ಜ್ಞಾನ, ಕೌಶಲ್ಯ, ಪರಿಶ್ರಮ ಹಾಗೂ ಸಂದರ್ಶನದಲ್ಲಿ ತೋರಿದ ಸಾಮರ್ಥ್ಯದಿಂದ ಈ ಯಶಸ್ಸು ಸಾಧ್ಯವಾಗಿದೆ ಎಂದು ಅವರು ತಿಳಿಸಿದರು. ಕಾಲೇಜಿನ ಗುಣಮಟ್ಟದ ಶಿಕ್ಷಣ, ಅನುಭವಿ ಅಧ್ಯಾಪಕರ ಮಾರ್ಗದರ್ಶನ ಹಾಗೂ ತರಬೇತಿ ಮತ್ತು ಉದ್ಯೋಗ ಘಟಕದ ನಿರಂತರ ಪ್ರಯತ್ನಗಳು ಈ ಸಾಧನೆಗೆ ಪ್ರಮುಖ ಕಾರಣವಾಗಿವೆ. ವಿದ್ಯಾರ್ಥಿಗಳಿಗೆ ಕೇವಲ ಪಠ್ಯಪುಸ್ತಕದ ಜ್ಞಾನವಷ್ಟೇ ಅಲ್ಲದೆ, ಉದ್ಯಮ ಕ್ಷೇತ್ರಕ್ಕೆ ಅಗತ್ಯವಿರುವ ತಾಂತ್ರಿಕ ಕೌಶಲ್ಯ, ಸಂವಹನ ಸಾಮರ್ಥ್ಯ ಮತ್ತು ವೃತ್ತಿಪರ ತರಬೇತಿ ನೀಡಲಾಗುತ್ತಿದೆ ಎಂದರು. ಇದಲ್ಲದೆ, ಇನ್ನೂ 16 ಪ್ರತಿಷ್ಠಿತ ಕಂಪನಿಗಳು ಕ್ಯಾಂಪಸ್ ನೇಮಕಾತಿಗಾಗಿ ಕಾಲೇಜಿಗೆ ಭೇಟಿ ನೀಡಲು ಒಪ್ಪಿಗೆ ಸೂಚಿಸಿದ್ದು, ಮುಂಬರುವ ದಿನಗಳಲ್ಲಿ ಮತ್ತಷ್ಟು ವಿದ್ಯಾರ್ಥಿಗಳಿಗೆ ಉದ್ಯೋಗ ದೊರೆಯುವ ನಿರೀಕ್ಷೆಯಿದೆ. ಇದರಿಂದ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಕಾಲೇಜಿನ ಉದ್ಯೋಗ ನೇಮಕಾತಿ ಪ್ರಮಾಣ ಮತ್ತಷ್ಟು ಹೆಚ್ಚಾಗುವ ವಿಶ್ವಾಸವಿದೆ ಎಂದು ಹೇಳಿದರು.

ವಿದ್ಯಾರ್ಥಿಗಳ ಸಾಧನೆ ಸಂಸ್ಥೆಗೆ ಹೆಮ್ಮೆಯ ಸಂಗತಿಯಾಗಿದೆ. ಉದ್ಯೋಗ ಪಡೆದ ವಿದ್ಯಾರ್ಥಿಗಳು ತಮ್ಮ ಜ್ಞಾನ, ಕೌಶಲ್ಯ, ಪರಿಶ್ರಮ ಮತ್ತು ಪ್ರಾಮಾಣಿಕತೆಯ ಮೂಲಕ ಉತ್ತಮ ವೃತ್ತಿಪರರಾಗಿ ಬೆಳೆದು ಸಮಾಜ ಹಾಗೂ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಜಾನಕುಂಟೆ ಬಸವರಾಜ್ ಹರ್ಷ ವ್ಯಕ್ತಪಡಿಸಿದರು. ಈ ಸಾಧನೆಗೆ ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಡಾ. ಕಣೇಕಲ್ ಮಹಾಂತೇಶ, ಸಂಘದ ಉಪಾಧ್ಯಕ್ಷರು ಹಾಗೂ ಆರ್.ವೈ.ಎಂ.ಇ.ಸಿ. ಅಧ್ಯಕ್ಷ ಜಾನಕುಂಟೆ ಬಸವರಾಜ್, ಕಾರ್ಯದರ್ಶಿ ಡಾ. ಅರವಿಂದ್ ಪಟೇಲ್, ಸಹಾಯಕ ಕಾರ್ಯದರ್ಶಿ ಯಾಲಿ ಮೇಟಿ ವಂಪನಗೌಡ, ಕೋಶಾಧಿಕಾರಿ ಬೈಲುವದ್ದಿಗೇರಿ ಎರಿಸ್ವಾಮಿ, ಆಡಳಿತ ಮಂಡಳಿ ಸದಸ್ಯರಾದ ಪ್ರಭುಸ್ವಾಮಿ ಎಸ್.ಎಂ. ಹಾಗೂ ಬಾಡದ ಪ್ರಕಾಶ್ ಅವರು ಆಯ್ಕೆಯಾದ ವಿದ್ಯಾರ್ಥಿಗಳನ್ನು ಅಭಿನಂದಿಸಿ ಮುಂದಿನ ವೃತ್ತಿಜೀವನಕ್ಕೆ ಶುಭ ಹಾರೈಸಿದರು.

ಇಂದಿರಾ ಗಾಂಧಿ ದೇಶದ ಉಕ್ಕಿನ ಮಹಿಳೆಯಾಗಿದ್ದರು: ಎಲ್. ಮಾರಣ್ಣ

ಇಂದಿರಾ ಗಾಂಧಿ ಅವರ 42ನೇ ಪುಣ್ಯಸ್ಮರಣೆ । ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 151ನೇ ಜನ್ಮದಿನಾಚರಣೆ



ಬಳ್ಳಾರಿ : ದೇಶದ ಮೊದಲ ಮಹಿಳಾ ಪ್ರಧಾನಿಯಾಗಿ ಆಡಳಿತ ನಡೆಸಿದ ಇಂದಿರಾ ಗಾಂಧಿ ಅವರು ತಮ್ಮ ದಿಟ್ಟ ನಿರ್ಧಾರಗಳು, ಆಡಳಿತ ಸಾಮರ್ಥ್ಯ ಹಾಗೂ ರಾಜಕೀಯ ಧೈರ್ಯದಿಂದ ದೇಶದ ಉಕ್ಕಿನ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು ಎಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯ ಎಲ್. ಮಾರಣ್ಣ ಅಭಿಪ್ರಾಯಪಟ್ಟರು.

ನಗರದ ಕಾಂಗ್ರೆಸ್ ಜಿಲ್ಲಾ ಕಚೇರಿಯಲ್ಲಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ 42ನೇ ಪುಣ್ಯಸ್ಮರಣೆ ಹಾಗೂ ದೇಶದ ಮೊದಲ ಗೃಹ ಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 151ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇಂದಿರಾ ಗಾಂಧಿ ಅವರು ದೇಶದ ರಾಜಕೀಯ ಇತಿಹಾಸದಲ್ಲಿ ಮಹತ್ವದ ಸ್ಥಾನ ಪಡೆದಿದ್ದಾರೆ. ದೇಶದ ಏಕತೆ, ಸಮಗ್ರತೆ ಹಾಗೂ ಅಭಿವೃದ್ಧಿಗಾಗಿ ಅವರು ಕೈಗೊಂಡ ನಿರ್ಧಾರಗಳು ಇಂದಿಗೂ ಸ್ಮರಣೀಯವಾಗಿವೆ.

ವಿರೋಧ ಪಕ್ಷದ ನಾಯಕರೇ ಅವರಿಗೆ ದುರ್ಗಾಮಾತೆ ಎಂಬ ಬಿರುದು ನೀಡಿದ್ದದ್ದು ಅವರ ದಿಟ್ಟ ನಾಯಕತ್ವಕ್ಕೆ ಸಾಕ್ಷಿಯಾಗಿದೆ ಎಂದು ಸ್ಮರಿಸಿದರು.

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ದೇಶದ ಮೊದಲ ಗೃಹ ಸಚಿವರಾಗಿ ನೂರಾರು ಸಂಸ್ಥಾನಗಳನ್ನು ಒಗ್ಗೂಡಿಸಿ ಅಖಂಡ ಭಾರತದ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಅವರ ದೇಶಪ್ರೇಮ, ಸಂಘಟನಾ ಶಕ್ತಿ ಮತ್ತು ಆಡಳಿತಾತ್ಮಕ ದೂರದೃಷ್ಟಿ ಪ್ರತಿಯೊಬ್ಬರಿಗೂ ಮಾದರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಹಿರಿಯ ನಾಯಕ ಎಲ್. ಮಾರಣ್ಣ, ಜಿಲ್ಲಾ ಅಧ್ಯಕ್ಷ ವಿಷ್ಣು ಬೋಯಪಾಟಿ, ಕೆಪಿಸಿಸಿ ವಕ್ತಾರ ಹಾಗೂ ಪ್ರಚಾರ ಸಮಿತಿ ಅಧ್ಯಕ್ಷ ವೆಂಕಟೇಶ್ ಹೆಗಡೆ, ಕಾರ್ಯದರ್ಶಿಗಳಾದ ವೈ. ಶ್ರೀನಿವಾಸುಲು, ಕಾರ್ಯಕಾರಿ ಸಮಿತಿ ಸದಸ್ಯೆ ವೆಂಕಟಲಕ್ಷ್ಮಿ ನಾರಾಯಣ, ಮಹಾನಗರ ಪಾಲಿಕೆ ಸದಸ್ಯೆ ಜಾನಕಮ್ಮ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಎರಕುಲ ಸ್ವಾಮಿ, ಕನೇಕಲ್ ಮಾಬುಸಾಬ್, ಅಖಿಲ್ ಅಹಮದ್, ಅಲಿವೇಲು ಸುರೇಶ್, ಧನುಂಜಯ್ ಹಮಾಲ್, ಅತ್ತಾವುಲ್ಲಾ, ಸಂಗನಕಲ್ಲು ವಿಜಯಕುಮಾರ್, ಬಿ.ಎ. ಮಲ್ಲೇಶ್ವರಿ, ಲಿಂಗರಾಜು, ರಂಗ, ಸುಮನ್, ನರಸಿಂಹರಾಜು, ಅರುಣ್ ಜ್ಯೋತಿ, ಕಟ್ಟೆ ಬಸಪ್ಪ, ಧಾರಪ್ಪ, ಗಂಗಾಧರ್ ಹಾಗೂ ತಿಪ್ಪೇಶ್ ಸೇರಿದಂತೆ ಅನೇಕ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ಕರವೇಯಿಂದ ವಿಜೃಂಭಣೆಯ ಕನ್ನಡ ರಾಜ್ಯೋತ್ಸವ

ಬಳ್ಳಾರಿ : ಕರ್ನಾಟಕ ರಕ್ಷಣಾ ವೇದಿಕೆ ಶಿವರಾಮೇಗೌಡ ಬಣದ ವತಿಯಿಂದ ಇಂದು ನಗರದಲ್ಲಿ ಅತ್ಯಂತ ವಿಜೃಂಭಣೆಯ 71ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಆಚರಿಸಲಾಯಿತು.ವೇದಿಕೆಯ ಜಿಲ್ಲಾ ಕಚೇರಿ ಪಾರ್ವತಿ ನಗರದಿಂದ ತಾಯಿ ಭುವನೇಶ್ವರಿ ಭಾವಚಿತ್ರವನ್ನು ದುರ್ಗಮ್ಮ ದೇವಸ್ಥಾನ ಅಂಡರ್ ಬ್ರಿಡ್ಜ್ ರಾಯಲ್ ಸರ್ಕಲ್ ಮೂಲಕ ನೂರಾರು ಜನ ವೇದಿಕೆಯ ಕಾರ್ಯಕರ್ತರು ಮತ್ತು ಕನ್ನಡ ಅಭಿಮಾನಿಗಳ ಸಮ್ಮುಖದಲ್ಲಿ ಮೆರವಣಿಗೆಯ ಮೂಲಕ

ಕೋಲಚಲಂ ಕಾಂಪೌಂಡ್ ಆವರಣದಲ್ಲಿರುವ ಧ್ವಜಕಟ್ಟೆಗೆ ಆಗಮಿಸಿ ಧ್ವಜಾರೋಹಣವನ್ನು ನೆರವೇರಿಸಲಾಯಿತು.ಧ್ವಜಾರೋಹಣ ನೆರವೇರಿಸಿ , ನಗರ ಮಾಜಿ ಶಾಸಕ ಸೋಮಶೇಖರ್ ರೆಡ್ಡಿ ಮಾತನಾಡಿ, ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮವನ್ನು ಸರ್ಕಾರದಿಂದಲೂ ಸಹ ಆಚರಿಸಲಾಗದ ರೀತಿಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಶಿವರಾಮೇಗೌಡ ಬಣದ ವತಿಯಿಂದ ಅತ್ಯಂತ ಅದ್ದೂರಿ ಮತ್ತು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ , ಈ ಕಾರ್ಯಕ್ರಮದ ರೂವಾರಿ ವೇದಿಕೆಯ ಬಳ್ಳಾರಿ ಮತ್ತು ವಿಜಯನಗರ ಜಿಲ್ಲಾಧ್ಯಕ್ಷ ರಾಜಣ್ಣ ಕುರಿಹಟ್ಟಿ ರಾಜಶೇಖರ್ ಮತ್ತು ಅವರ ಕನ್ನಡ ಕಾರ್ಯಕರ್ತರ ಪಡೆ ಅತ್ಯಂತ ಯಶಸ್ವಿಯಾಗಿ ಆಯೋಜಿಸಿ ಆಚರಿಸಿದ್ದಾರೆ ವೇದಿಕೆಯ ಎಲ್ಲಾ ಕಾರ್ಯಕರ್ತರು ಅಭಿನಂದನಾರ್ಹರು ಎಂದು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಕಮಚರ್ಲೇಡು ಮಠದ ಕಲ್ಯಾಣ ಸ್ವಾಮಿಗಳು ಮಾತನಾಡಿ, ಕನ್ನಡ ತಾಯಿ ಭುವನೇಶ್ವರಿಯನ್ನು ನೆನೆಯುವುದು ನಾಡಿನ ಎಲ್ಲರ ಆದ್ಯ ಕರ್ತವ್ಯವಾಗಿದೆ, ಕನ್ನಡಿಗರು ಕೇವಲ ನವಂಬರ್ ನಲ್ಲಿ ಮಾತ್ರ ಕನ್ನಡ ತಾಯಿಯನ್ನು ನೆನೆಸಿಕೊಳ್ಳದೆ ಸದಾ ನಾಡು ನುಡಿ ಮತ್ತು ಕನ್ನಡ ತಾಯಿ ಭುವನೇಶ್ವರಿಯ ಸೇವೆಯನ್ನು ಮಾಡುವುದು ಅಗತ್ಯವಾಗಿದೆ ಇಂತಹ ಸೇವೆಯನ್ನು ಕರವೇ ಶಿವರಾಮೇಗೌಡ ಬಣದ ರಾಜಶೇಖರ್ ಇಂತಹ ಕಾರ್ಯವನ್ನು ಮಾಡುತ್ತಿದ್ದಾರೆ ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ವೇದಿಕೆಯ ಜಿಲ್ಲಾಧ್ಯಕ್ಷ ಕುರುಗಟ್ಟಿ ರಾಜಣ್ಣ ಮಾತನಾಡಿದರು, ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕೆಎಸ್ ದಿವಾಕರ್ ಮಹಾನಗರ ಪಾಲಿಕೆ ಸದಸ್ಯರಾದ ಮೋಧಕರ್ ಶ್ರೀನಿವಾಸ್, ಕೆ ಹನುಮಂತಪ್ಪ ಗುಡಿಗಂಟಿ ಹನುಮಂತಪ್ಪ, ಗೋವಿಂದ ಜಿಲ್ಲಾ ಉಪಾಧ್ಯಕ್ಷ ಕಟಗಿ ಸೂರಿ ತಾಲೂಕ ಅಧ್ಯಕ್ಷ ಮೊಕಮಲ್ಲಯ್ಯ, ವೇದಿಕೆಯ ಪದಾಧಿಕಾರಿಗಳಾದ ಶಿವು ಕುಡುತಿನಿ ಮಾರಣ್ಣ ಜಡೇ ಗೌಡ ರಾಮಮೂರ್ತಿ ನಂದೀಶ್ ಬಸವರಾಜ್ ಮಲ್ಲಿಕಾರ್ಜುನ ಶ್ರೀಶೈಲ ರಮೇಶ್ ಹರಪನಹಳ್ಳಿ, ಚಂದ್ರಶೇಖರ್ ಅಮರನಾಥ್ ಮತ್ತು ಮಹಿಳಾ ಕಾರ್ಯಕರ್ತರಾದ ಹಂಪಿ ರಮಣ ದೇವಿ ಕವಿತಾ ಜಯಶ್ರೀ ಶಕುಂತಲಾ ನಾಗರಾಜ್ ಶಂಕರ್ ವಿಶ್ವನಾಥ್ ವಿನಯ್ ಸೇರಿದಂತೆ ವೇದಿಕೆಯ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

ಹಾಲಿನ ದರ ಏರಿಕೆ ಖಂಡಿಸಿ ಹಾಲಿನ ಕ್ಯಾನ್ ಹೊತ್ತು ಬಿಜೆಪಿ ವಿನೂತನ ಪ್ರತಿಭಟನೆ

ಜನಸಾಮಾನ್ಯರ ಮೇಲೆ ಬೆಲೆ ಏರಿಕೆಯ ಹೊರೆ ಹೊರಿಸುವುದು ಸರಿಯಲ್ಲ: ಸೋಮಶೇಖರ ರೆಡ್ಡಿ ಆಕ್ರೋಶ



ಬಳ್ಳಾರಿ, ಅ.31: ರಾಜ್ಯ ಸರ್ಕಾರ ಹಾಲಿನ ದರವನ್ನು ಪ್ರತಿ ಲೀಟರ್‌ಗೆ 8 ರೂಪಾಯಿ ಹೆಚ್ಚಿಸಿರುವುದನ್ನು ಖಂಡಿಸಿ ಬಳ್ಳಾರಿ ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ನಗರದಲ್